ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 111 RNI Number : KNKAN/25/A2770 30-04-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :111 ರಾಯಚೂರು 30-04-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ಜನಗಣತಿ: ಖಾಸಗಿ ಶಾಲೆಯ ಸಿಬ್ಬಂದಿ ಗಣತಿಯಲ್ಲಿ ಭಾಗಿಯಾಗಲು ಹೈಕೋರ್ಟ್ ಸೂಚನೆ

ಬೆಂಗಳೂರು : ಜನಗಣತಿ ಎಂಬುದು ರಾಷ್ಟ್ರೀಯ ಕರ್ತವ್ಯವಾಗಿದ್ದು, ಅದಕ್ಕಾಗಿ ಬದ್ಧರಾಗಿರಬೇಕು ಎಂದು ತಿಳಿಸಿರುವ ಹೈಕೋರ್ಟ್, ರಜೆಯಲ್ಲಿರುವ ಶಿಕ್ಷಕರನ್ನು ತಕ್ಷಣ ಕರ್ತ್ಯವಕ್ಕೆ ಹಿಂದಿರುಗಿ, ಗಣತಿ ಕಾರ್ಯದಲ್ಲಿ ಭಾಗಿಯಾಗುವಂತೆ ಬೆಂಗಳೂರು ನಗರದ ಖಾಸಗಿ ಶಾಲೆಯ ಪ್ರಾಂಶುಪಾಲರೊಬ್ಬರಿಗೆ ನಿರ್ದೇಶನ ನೀಡಿದೆ.

ಅಲ್ಲದೆ, ಮುಂದಿನ ಒಂದು ವಾರದಲ್ಲಿ ಎಲ್ಲ ಶಿಕ್ಷಕರನ್ನು ಹಿಂದಿರುಗುವಂತೆ ಸೂಚನೆ ನೀಡಿ, ಜನಗಣತಿ ಆಯುಕ್ತರ ಮುಂದೆ ವರದಿ ಮಾಡಿಕೊಳ್ಳುವುದನ್ನು ಖಾತರಿ ಪಡಿಸಬೇಕು ಎಂಬ ಷರತ್ತಿನೊಂದಿಗೆ ಶಾಲೆಯ ಪ್ರಾಂಶುಪಾಲರ ವಿರುದ್ಧ ಜನಗಣತಿ ಕಾಯ್ದೆಯ ಸೆಕ್ಷನ್ 11ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸುವಂತಹ ಕ್ರಮಕ್ಕೆ ಮುಂದಾಗಬಾರದು ಎಂದು ತಿಳಿಸಿದೆ.

ಶಾಲೆಯ ಶಿಕ್ಷಕರನ್ನು ಜನಗಣತಿಗೆ ನಿಯೋಜನೆ ಮಾಡದ ಶಾಲೆಯ ಮೇಲೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಪ್ರಧಾನ ಜನಗಣತಿ ಅಧಿಕಾರಿ ಹೊರಡಿಸಿದ್ದ ಆದೇಶ ಪ್ರಶ್ನಿಸಿ ಜೆ.ಪಿ. ನಗರದ 7ನೇ ಹಂತದಲ್ಲಿರುವ ದಿ ಬ್ರಿಗೇಡ್ ಶಾಲೆ ಪ್ರಾಂಶುಪಾಲ ಶುಭಾರ್ ಜೈನ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಚ್ಚಿನ್ ಶಂಕರ್ ಮಗದಂ ಅವರಿದ್ದ ನ್ಯಾಯಪೀಠ ಈ ಸೂಚನೆ ನೀಡಿದೆ.

ಅಲ್ಲದೆ, ಸುಮಾರು 10 ರಿಂದ 11 ವರ್ಷಗಳಿಗೊಮ್ಮೆ ಜನಗಣತಿ ನಡೆಯಲಿದೆ. ಪ್ರತಿ ಮನೆ ಮನೆಗೂ ಭೇಟಿ ನೀಡಿ ಮಾಹಿತಿ ಪಡೆದುಕೊಂಡು ಲಿಖಿತವಾಗಿ ದಾಖಲಿಸಿಕೊಳ್ಳಬೇಕಾಗುತ್ತದೆ. ಹೀಗಿರುವಾಗ ಶಾಲೆಯ ಮುಖ್ಯಸ್ಥರು ಈ ರೀತಿಯಲ್ಲಿ ವರ್ತಿಸಲು ಪ್ರಾರಂಭಿಸಿದರೆ, ಸರ್ಕಾರ ಗಣತಿ ಕಾರ್ಯ ಪೂರ್ಣಗೊಳಿಸುವುದಾದರೂ ಹೇಗೆ? ಎಂದು ಪ್ರಶ್ನಿಸಿತು. ಅಲ್ಲದೆ, ಮುಂದಿನ ವಿಚಾರಣೆ ವೇಳೆ ಅರ್ಜಿದಾರರ ಶಾಲೆಯಲ್ಲಿ ಲಭ್ಯವಿರುವ ಶಿಕ್ಷಕರ ಪಟ್ಟಿಯನ್ನು ಒದಗಿಸುವಂತೆ ಸೂಚನೆ ನೀಡಿ ವಿಚಾರಣೆ ಮುಂದೂಡಿದೆ.

ಪ್ರಕರಣದ ಹಿನ್ನೆಲೆ : ದೇಶದಾದ್ಯಂತ ಮೊದಲ ಹಂತ ಜನಗಣತಿ ಎಪ್ರಿಲ್ 1 ರಿಂದ ಸ್ವಯಂ ಗಣತಿಯೊಂದಿಗೆ ಪ್ರಾರಂಭವಾಗಿದ್ದು, ಎರಡನೇ



ಹಂತವಾಗಿ ಎಪ್ರಿಲ್ 16ರಿಂದ ಗಣತಿದಾರರು ಮನೆ ಮನೆಗೆ ತೆರಳಿ ಕುಟುಂಬಸ್ಥರ ವಿವರ ಪಡೆದುಕೊಳ್ಳುತ್ತಿದ್ದಾರೆ. ಎಪ್ರಿಲ್ ಮತ್ತು ಸೆಪ್ಟಂಬರ್ 2026ರ ಅಂತ್ಯಕ್ಕೆ ಗಣತಿ ಕಾರ್ಯ ಪೂರ್ಣಗೊಳ್ಳಬೇಕಾಗಿದೆ.

ಇದರ ಮುಂದುವರೆದ ಭಾಗವಾಗಿ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಪ್ರಧಾನ ಜನಗಣತಿ ಅಧಿಕಾರಿಯು ಎಪ್ರಿಲ್ 9 ರಂದು ಅರ್ಜಿದಾರ ಶಾಲೆಗೆ ಪತ್ರ ಬರೆದು ಶಾಲೆಯ ಸಿಬ್ಬಂದಿಯನ್ನು ಜನ ಗಣತಿಗೆ ಕಾರ್ಯಕ್ಕೆ ನಿಯೋಜನೆ ಮಾಡುವಂತೆ ಸೂಚನೆ ನೀಡಿದ್ದರು. ಇದನ್ನು ಪ್ರಶ್ನಿಸಿ ಅರ್ಜಿದಾರರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಶಾಲೆಯಲ್ಲಿರುವ 84 ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ನಿಯೋಜಿಸಬಹುದಾಗಿದೆ. ಇನ್ನುಳಿದ ಶಿಕ್ಷಕರು ಬೇಸಿಗೆ ರಜೆ ಹಿನ್ನೆಲೆಯಲ್ಲಿ ವಿದೇಶಗಳಲ್ಲಿ ಪ್ರವಾಸದಲ್ಲಿದ್ದಾರೆ.

ಶಿಕ್ಷಕರು ರಜೆ ಪಡೆಯುವುದಕ್ಕೆ ಅವಕಾಶ ಇರುವುದರಿಂದ ತಕ್ಷಣ ಹಿಂದಿರುಗುವಂತೆ ಸೂಚನೆ ನೀಡುವುದಕ್ಕೆ ಸಾಧ್ಯವಿಲ್ಲ ಎಂದು ಪೀಠಕ್ಕೆ ವಿವರಿಸಿದರು. ಅಲ್ಲದೆ, ಈಗಾಗಲೇ 12 ಮಂದಿ ಶಿಕ್ಷಕರನ್ನು ಜನಗಣತಿಗೆ ನಿಯೋಜಿಸಲಾಗಿದ್ದು, ಈಗಾಗಲೇ ಕೆಲಸಕ್ಕೆ ವರದಿ ಮಾಡಿಕೊಂಡಿದ್ದಾರೆ, ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸುವುದಕ್ಕೆ ಪ್ರಯತ್ನ ಮಾಡಲಾಗುತ್ತಿದೆ. ಆದ್ದರಿಂದ ಗಣತಿ ಅಧಿಕಾರಿ ಹೊರಡಿಸಿರುವ ಆದೇಶ ರದ್ದುಮಾಡಬೇಕು ಎಂದು ಕೋರಿದರು.



ನವಜಾತ ಶಿಶು ಸಾವು, ಶವವಿಟ್ಟು ಕುಟುಂಬಸ್ಥರ ಆಕ್ರೋಶ; ವೈದ್ಯರ ನಿರ್ಲಕ್ಷ್ಯ ಆರೋಪ

ಕವಿತಾಳ,ಏ.29

ವೈದ್ಯರು ನಿರ್ಲಕ್ಷ್ಯದಿಂದ ನವಜಾತ ಶಿಶು ಸಾವನ್ನಪ್ಪಿದೆ ಎಂದು ಕುಟುಂಬಸ್ಥರು ಆರೋಪಿಸಿ ತಾಯಿ ಮಕ್ಕಳ ಆಸ್ಪತ್ರೆಯ ಮುಂಭಾಗ ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟಿಸಿದರು.

ಕವಿತಾಳ ಸಮೀಪದ ಜಂಗಮರಹಳ್ಳಿಯ ಪಾರಮ್ಮ ಗುಂಡಪ್ಪ ಎನ್ನುವವರು ತಾಯಿ ಮಕ್ಕಳ ಆಸ್ಪತ್ರೆಗೆ ಹೆರಿಗೆಗೆಂದು ದಾಖಲಾಗಿದ್ದರು.

ಕಳೆದೊಂದು ವಾರದಿಂದ ಸಹಜ ಹೆರಿಗೆ ಆಗುತ್ತದೆ ಎಂದು ಚಿಕಿತ್ಸೆ ನೀಡುತ್ತಲೇ ಬಂದ ವೈದ್ಯರು ಮಂಗಳವಾರ ಬೆಳಗ್ಗೆ ಏಕಾಏಕಿ ಮಗುವಿನ ಉಸಿರಾಟ ಸರಿಯಿಲ್ಲ ಎಂದು ಶಸ್ತ್ರಚಿಕಿತ್ಸೆ ಮಾಡಿದ್ದು ಮಗು ಸಾವನ್ನಪ್ಪಿದೆ. ಸಾವಿಗೆ ವೈದ್ಯರ ನಿರ್ಲಕ್ಷ್ಯ ಎಂದು ಕುಟುಂಬಸ್ಥರು ಆಕ್ರೋಶ ಹೊರಹಾಕಿದ್ದಾರೆ.

ಸೂಕ್ತ ಸಮಯಕ್ಕೆ ಚಿಕಿತ್ಸೆ ದೊರೆಯದೇ ಮಗು ಸಾವನ್ನಪ್ಪಿದೆ ಎಂದು ವೈದ್ಯರು ಹಾಗೂ ಕುಟುಂಬಸ್ಥರ ನಡುವೆ ಕೆಲ ಕಾಲ ಮಾತಿನ ಚಕಮಕಿ ನಡೆಯಿತು. ಸಾವಾಗೀಡಾದ ಮಗುವನ್ನಿಟ್ಟು ಕುಟುಂಬಸ್ಥರು ವೈದ್ಯರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಸ್ಥಳಕ್ಕೆ ಪೊಲೀಸರು ಆಗಮಿಸಿ ಕುಟುಂಬಸ್ಥರಿಗೆ ಮನವೊಲಿಸಲು ಪ್ರಯತ್ನಿಸಿದರು.

ತಾಯಿ ಮಕ್ಕಳ ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಕಾವೇರಿ ಶಾವಿ ಮಾತನಾಡಿ, ದಿ.27ರಂದು ಹೆರಿಗೆಗಾಗಿ ಪಾರಮ್ಮ ಎನ್ನುವ ಗರ್ಭಿಣಿ ಮಹಿಳೆ ಆಸ್ಪತ್ರೆಗೆ ದಾಖಲಾಗಿದ್ದರು. ಸಹಜ ಹೆರಿಗೆ ಆಗದ ಹಿನ್ನಲೆ ಶಸ್ತ್ರಚಿಕಿತ್ಸೆ ಮೂಲಕ ಹೆರಿಗೆ ಮಾಡಿಸಿಕೊಳ್ಳಲಾಗಿದೆ. ಗರ್ಭದಲ್ಲೇ ಮಗುವಿನ ಎದೆಬಡಿತ ಜೋರಾಗಿತ್ತು. ಕೃತಕ ಉಸಿರಾಟ ಕೊಟ್ಟಾಗ್ಯೂ ಮಗುವನ್ನು ಉಳಿಸಿಕೊಳ್ಳಲು ಆಗಲಿಲ್ಲ ಎಂದು ತಿಳಿಸಿದರು.

ನೀಟ್ ಪರೀಕ್ಷಾ ಪೂರ್ವಭಾವಿ ಸಭೆ

ಪಾರದರ್ಶಕ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಿ:ಎಡಿಸಿ ಶಿವಾನಂದ



ರಾಯಚೂರು,ಏ.29-

ಮೇ.3ರಂದು ರಾಯಚೂರು ನಗರದ 11 ಪರೀಕ್ಷಾ ಕೇಂದ್ರಗಳಲ್ಲಿ ನೀಟ್-ಯುಜಿ ಪರೀಕ್ಷೆ-2026 ಜರುಗಲಿದ್ದು, ಪಾರದರ್ಶಕವಾಗಿ ಹಾಗೂ ವ್ಯವಸ್ಥಿತವಾಗಿ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಏಪ್ರಿಲ್ 29ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ವಿಡಿಯೋ ಕಾನ್ಫರೇನ್ಸ್ ಸಭಾಂಗಣದಲ್ಲಿ ಜರುಗಿದ ನೀಟ್ ಪರೀಕ್ಷಾ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿದ ಎಲ್ಲರೂ ಪರೀಕ್ಷಾ ಮಾರ್ಗಸೂಚಿಗಳನ್ನು ಪಾಲಿಸಬೇಕು. ನೀಟ್ ಪರೀಕ್ಷೆ ಬಹಳ ಸೂಕ್ಷ್ಮವಾಗಿದೆ. ಪರೀಕ್ಷಾ ಕಾರ್ಯಕ್ಕೆ ನಿಯೋಜಿಸ'ಲಾದ ಅಧಿಕಾರಿಗಳು, ಮಾರ್ಗಾಧಿಕಾರಿಗಳು, ವೀಕ್ಷಕರು, ಕೊಠಡಿ ಮೇಲ್ವಿಚಾರಕರು ತಮ್ಮ ಕರ್ತವ್ಯಗಳಲ್ಲಿ ಯಾವುದೇ ಲೋಪವಾಗದಂತೆ ಜವಾಬ್ದಾರಿಯಿಂದ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದರು.

ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡಬಾರದು. ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿತಗೊಂಡ ಅಧಿಕಾರಿಗಳು, ಉಪನ್ಯಾಸಕರು ಪರೀಕ್ಷಾ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಕೊಠಡಿಯ ಒಳಗೆ ಶಿಸ್ತುಬದ್ಧವಾಗಿ ಪರೀಕ್ಷಾ ಪ್ರಾಧಿಕಾರದ ನಿಯಮಗಳ ಉಲ್ಲಂಘನೆಯಾಗದಂತೆ ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದರು.

ಎಲೆಕ್ಟ್ರಾನಿಕ್ ಉಪಕರಣಗಳ ನಿಷೇಧ: ಪರೀಕ್ಷಾರ್ಥಿಗಳು ಹಾಗೂ ಕೊಠಡಿಯ ಮೇಲ್ವಿಚಾರಕರಾಗಲಿ ಪರೀಕ್ಷಾ ಕೇಂದ್ರದೊಳಗೆ ಅತ್ಯಾಧುನಿಕ ಎಲೆಕ್ಟ್ರಾನಿಕ್ ಉಪಕರಣಗಳಾದ ಮೊಬೈಲ್, ಬ್ಲೂಟೂತ್, ಇಯರ್ ಫೋನ್‌ಗಳು, ಮೈಕ್ರೋಫೋನ್, ಕ್ಯಾಲಕ್ಯುಲೇಟರ್ ಹಾಗೂ ಗಡಿಯಾರಗಳನ್ನು ನಿಷೇಧಿಸಲಾಗಿದ್ದು, ಈ ಕುರಿತಂತೆ ಅಧಿಕಾರಿಗಳು ಎಚ್ಚರವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಿಸಿ ಟಿವಿ-ಜಾಮರ್: ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಅಳವಡಿಕೆ, ಜಾಮರ್ ಹಾಗೂ ಕೊಠಡಿಯೊಳಗೆ ಗಡಿಯಾರ ಅಳವಡಿಕೆ ಕಡ್ಡಾಯವಾಗಿದೆ. ಪರೀಕ್ಷಾರ್ಥಿಗಳಿಗೆ ಶುದ್ಧ ಕುಡಿಯುವ ನೀರು, ಗಾಳಿ, ಬೆಳಕು, ಸೂಕ್ತ ಪೀಠೋಪಕರಣ ಒಳಗೊಂಡತೆ ಮೂಲಭೂತ ಸೌಕರ್ಯ

3 ನೇ ಪುಟಕ್ಕೆ

ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದಿಂದ ಜಿಲ್ಲಾಧಿಕಾರಿ ನಿತೀಶ್ ಕೆರಿಗೆ ಸನ್ಮಾನ



ರಾಯಚೂರು.ಏ.29- 205-26 ನೇ ಸಾಲಿನಎಸ್ ಎಸ್ ಎಲ್ ಸಿ ಫಲಿತಾಂಶ ರಾಯಚೂರು ದಾಖಲೆಯ ಫಲಿತಾಂಶವನ್ನು ಪಡೆಯಲಿಕ್ಕೆ ಮಾರ್ಗದರ್ಶನ ನೀಡಿದ, ಜಿಲ್ಲಾಧಿಕಾರಿಗಳು ರಾಯಚೂರು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ರಾಯಚೂರ. ಉಪನಿರ್ದೇಶಕರು (ಆಡಳಿತ)ಮತ್ತು ಉಪನಿರ್ದೇಶಕರು(ಅಭಿವೃದ್ಧಿ) ಹಾಗೂ ಜಿಲ್ಲಾ ನೋಡೆಲ್ ಅಧಿಕಾರಿಗಳಿಗೆ ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದ ಜಿಲ್ಲಾದ್ಯಕ್ಷರಾದ ರಾಜಶೇಖರ ದಿನ್ನಿ ನೇತೃತ್ವದಲ್ಲಿ ಸನ್ಮಾನಿಸಿ, ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಲಿಂಗಸೂಗೂರು ತಾಲೂಕ ಅಧ್ಯಕ್ಷರಾದ ಶರಣಗೌಡ ಅಗಸಿಮುಂದಿನ, ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾದ ಶಶಿಕಲಾ ದಿವಾಕರ್ ಗಾಣದಾಳ್, ಗೌರವಾಧ್ಯಕ್ಷರಾದ ಗದ್ದಿ ಬಸಪ್ಪ ಪದಾಧಿಕಾರಿಗಳಾದ ಜಗದೀಶ್, ಶಂಕ್ರಪ್ಪ ಸಕ್ರಿ, ಪಿರೆಡ್ಡಿ ,ಶಿವಕುಮಾರ್ ಕನ್ನೂರ್ , ಮೂಕನಗೌಡ ಪೊಲೀಸ್ ಪಾಟೀಲ್ ,ಜಾಗಿರ್ ವೆಂಕಟಾಪ್ಪುರ್

3 ನೇ ಪುಟಕ್ಕೆ

ಪ್ರಭಾರಿ ಮುಖ್ಯಾಧಿಕಾರಿ ಅಶೋಕಪವಾರ ಮಾರ್ಕಪ್ಪ- ಮೌಲಾಸಾಬರಿಂದ ಸನ್ಮಾನ



ಸಿರವಾರ.ಏ.29-

ಸ್ಥಳೀಯ ಪಟ್ಟಣ ಪಂಚಾಯತಿಗೆ ಪ್ರಭಾರಿ ಮುಖ್ಯಾಧಿಕಾರಿ ಅದಿಕಾರ ಸ್ವಿಕರ ಮಾಡಿಕೊಂಡಿರುವ ತಹಸೀಲ್ದಾರ ಹಾಗೂ ಪ.ಪಂಚಾಯತಿ ಪ್ರಭಾರಿ ಮುಖ್ಯಾಧಿಕಾರಿ ಅಶೋಕಪವಾರ ಅವರಿಗೆ ಪ.ಪಂ ಸದಸ್ಯರಾದ ಮಾರ್ಕಪ್ಪ ಮತ್ತು ಮೌಲಾಸಾಬ ವರ್ಚಸ್ ಅವರು ಸನ್ಮಾನಿಸಿ ಅಭಿನಂದಿಸಿದರು. ಬೆಸಿಗ್ಗೆ ಪ್ರಾರಂಭವಾಗಿದೆ. ಮುಖ್ಯಾಧಿಕಾರಿ ಇಲ್ಲದ ಕಾರಣ ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಕಷ್ಟವಾಗಿತು. ನೀರಿನ ಸಮಸ್ಯೆ ಹೆಚ್ಚಾಗುತ್ತಿದೆ. ಮಳೆಗಾಲ ಪ್ರಾರಂಭವಾಗುತ್ತಿರುವ ಕಾರಣ ಮುಖ್ಯ ರಸ್ತೆಯ ಕಾಮಗಾರಿ ಆದಷ್ಟು ಬೇಗ ಪೂರ್ಣಗೊಳಿಸುವಂತೆ ಮನವಿ ಮಾಡಿದರು. ನೀವು ಇಲ್ಲಿಯೇ ಕೆಲಸ ಮಾಡಿದ ಕಾರಣ ಸಮಸ್ಯೆಗಳ ಬಗ್ಗೆ ತಿಳಿದಿರುತ್ತದೆ. ಎಲ್ಲಾ ವಾರ್ಡಗಳಿಗೆ ಅಭಿವೃದ್ದಗೆ ಶ್ರಮಿಸಿ ಎಂದರು. ಈ ಸಂದರ್ಭದಲ್ಲಿ ಸಮುಸಾಯ ಸಂಘಟನೆ ಅಧಿಕಾರಿ ಹಂಪಯ್ಯಪಾಟೀಲ್, ಜೆಇ ಹುಸೇನ ಸಾಬ್, ಲಕ್ಷ್ಮೀ ಪದ್ಮಾ, ಪ್ರದೀಪ್ ಸೇರಿ ಇನ್ನಿತರರು ಇದ್ದರು.



ತಾಲೂಕಿಗೆ ಪ್ರಥಮ ಸ್ಥಾನ ಪಡೆದ ಚೈತ್ರಾ ಗೆ ಸನ್ಮಾನ

ಸಿರವಾರ.ಏ.29-

2025-26 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ವಿದ್ಯಾರ್ಥಿನಿ ಚೈತ್ರಾ (625-611) ತಾಲೂಕಿಗೆ ಪ್ರಥಮ ಸ್ಥಾನ ಪಡೆದಿರುವುದರಿಂದ ಶಾಲೆಯ ಪ್ರಚಾರ್ಯರಾದ ಶರಣಬಸವ ಹಾಗೂ ಶಿಕ್ಷಕರಿಂದ ಸನ್ಮಾನಿಸಿ ಅಭಿನಂದಿಸಲಾಯಿತು.



ವಿ ಆರ್ ಎಸ್ ಶಾಲೆಯ ಎಸ್ ಎಸ್ ಎಲ್ ಸಿ ಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸನ್ಮಾನ

ಸಿರವಾರ.ಏ.29-

ಪಟ್ಟಣದ ವಿದ್ಯಾವಾಹಿನಿ ಸಿ ಬಿ ಎಸ್ ಇ ಶಾಲೆ 2025-26 ಸಾಲಿನ (ಕೇಂದ್ರ ಪಟ್ಯಕ್ರಮ)ಎಸ್ ಎಸ್ ಎಲ್ ಸಿ ಶಾಲಾ ಪಲಿತಾಂಶ 100 ಕ್ಕೆ 100 ರಷ್ಟು ಬಂದಿದ್ದು, ಅದರಲ್ಲಿ ಶಿವತೇಜ ಡಿ ಪುತ್ರನ್, ಸಿರವಾರ (93)ಶಾಲೆಗೆ ಪ್ರಥಮ ಸುಷ್ಮಾ ಎಮ್ ಕವಿತಾಳ ದ್ವಿತೀಯ(88.6) ಸ್ಥಾನ,ಹರ್ವಾಜಾವುದ್ ಅಭೀಯಾ ಮಾನ್ವಿ (88.2)ತೃತೀಯ ಸ್ಥಾನ. ನಿಕಿಲ್ ಪಟ್ಟೆದರ್ ಕಸ್ಬೆ ಕ್ಯಾಂಪ್(85) ನಾಲ್ಕನೇಯ ಸ್ಥಾನ ಪಡೆದಿರುವದರಿಂದ ನಾಲ್ಕು ವಿದ್ಯಾರ್ಥಿಗಳಿಗೆ ,ಮಂಗಳವಾರ ಶಾಲಾ ಆಡಳಿ ಸನ್ಮಾನಿಸಿ ಗೌರವಿಸಿದ್ದಾರೆ.

ಮಾನ್ವಿ ಪಟ್ಟಣದಲ್ಲಿ ಸಮಸ್ಯೆಗಳ ಸರಮಾಲೆ : ಜನತೆಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಬಿಜೆಪಿ ಮನವಿ

ಮಾನ್ವಿ,ಏ.29-

ಪಟ್ಟಣದ ಜನತೆ ಅನೇಕ ರೀತಿಯ ಮೂಲಭೂತ ಸೌಲಭ್ಯಗಳಿಂದ ವಂಚಿತಗೊಂಡು ನರಕಯಾತನೆ ಅನುಭವಿಸುತ್ತಿದ್ದು ಪ್ರಮುಖವಾಗಿ ಕುಡಿಯುವ ನೀರಿನ ಸಮಸ್ಯೆ ಮತ್ತು ಸುಸಜ್ಜಿತ ಚರಂಡಿ, ವಿದ್ಯುತ್ ದೀಪ, ಕಸ ವಿಲೇವಾರಿ, ರಸ್ತೆ ಸೇರಿದಂತೆ ಇನ್ನೂ ಮುಂತಾದ ಸಮಸ್ಯೆಗಳ ಅಗರ ಕುರಿತು ಮಂಗಳವಾರ ಮಾಜಿಶಾಸಕ ಗಂಗಾಧರನಾಯಕ ನೇತೃತ್ವದ ಬಿಜೆಪಿ ನಿಯೋಗ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿ ಪರಿಹಾರಕ್ಕೆ ಒತ್ತಾಯಿಸಿದರು.

ಮಾನ್ವಿ ನಗರದ ಪುರಸಭೆ ವ್ಯಾಪ್ತಿಯಲ್ಲಿರುವ ಹಲವಾರು ಸಮಸ್ಯೆಗಳ ಕುರಿತು ಕಳೆದು ಒಂದೂವರೆ ವರ್ಷದಿಂದ ನಿರಂತರವಾಗಿ ಮನವಿ ಪತ್ರಗಳನ್ನು ಸಲ್ಲಿಸದಾಗಿಯೂ ಯಾವುದೇ ಸಮಸ್ಯೆಗಳು ಇದುವರೆಗೆ



ಪರಿಹಾರ ಆಗದೆ ಇರುವುದರಿಂದ ಮಾಜಿಶಾಸಕ ಗಂಗಾಧರನಾಯಕ ನೇತೃತ್ವದಲ್ಲಿ ಜಿಲ್ಲಾಧಿಕಾಯನ್ನುಭೇಟಿಯಾಗಿ ಬಸ್ ನಿಲ್ದಾಣ ಮುಂಭಾಗ ಮತ್ತು ಎಸ್ ಬಿಐ ಬ್ಯಾಂಕ್ ಹತ್ತಿರ ಇರುವ ಕಮಾನ್ 80 ಫೀಟ್ ರಸ್ತೆಯಲ್ಲಿರುವ ಕಾಯಿಪಲ್ಲೆ ತಳ್ಳು ಬಂಡಿಗಳು ಮತ್ತು ಮುಖ್ಯ ರಸ್ತೆಯಲ್ಲಿ ಕಾಯಿಪಲ್ಲೆ ಮಾರಾಟ ಮಾಡುವವರನ್ನು ಕೂಡಲೇ ಪುರಸಭೆ ಕಾರ್ಯಾಲಯ ಕಟ್ಟಡದ ಹಿಂದುಗಡೆ ಇರುವ ಸಂತೆ ಮಾರುಕಟ್ಟೆಗೆ ಸ್ಥಳಾಂತರಿಸಬೇಕು. ಪಂಪಾ ಉದ್ಯಾನವನದಲ್ಲಿರುವ ನೀರಿನ ಮೇಲ್ತೊಟ್ಟಿಯಲ್ಲಿ ನೀರು ತುಂಬಿಸುವಾಗ ಅಪಾರ ಪ್ರಮಾಣದ ನೀರು ಚರಂಡಿಗೆ ಹೋಗುವ ಮೂಲಕ ಪೋಲಾಗುತ್ತಿರುವುದು, ಪಂಪಾ ಹೌಸಿಂಗ್ ಟ್ಯಾಂಕಿನಿಂದ ನೀರು ವಿವಿಧ ಭಾಗಗಳಿಗೆ ಬಿಡುವಾಗ ಮನೆಗಳಿಗೆ ತಕ್ಕಂತೆ ಸಮಯ ಪಾಲನೆ ಆಗುತ್ತಿಲ್ಲ. ಅತಿ ಹೆಚ್ಚು ಜನಸಂಖ್ಯೆ ಮತ್ತು ಮನೆಗಳಿರುವ ಪಂಪಾಹೌಸಿಂಗ್ ಕಾಲೋನಿ ಮತ್ತು ಕೆಎಚ್‌ಬಿ ಕಾಲೋನಿಗಳಿಗೆ ಒಂದು ಗಂಟೆ ನೀರು ಬಿಟ್ಟರೆ ಅತಿ ಕಡಿಮೆ ಜನಸಂಖ್ಯೆ ಇರುವ ಕೆಇಬಿ ಕಾಲೋನಿ ಏರಿಯಾಗೆ 2 ಗಂಟೆ, ಇಂದಿರಾ ನಗರಕ್ಕೆ 2 ಗಂಟೆ ನೀರು ಬಿಡುತ್ತಾರೆ. ಇದು ಉದ್ದೇಶಪೂರ್ವಕ ತಾರತಮ್ಯ ತುಂಗಭದ್ರಾ ನದಿಯಲ್ಲಿ ಸಾಕಷ್ಟು ನೀರು ಹರಿಯುತ್ತಿದ್ದರೂ 3, 4, 5 ದಿನಗಳಿಗೊಮ್ಮೆ ನೀರು ಸರಬರಾಜು ಆಗುತ್ತಿರುವುದನ್ನು ಸರಿಪಡಿಸಬೇಕು. ಪಟ್ಟಣದ ಎಲ್ಲಾ ಬಡಾವಣೆಗಳಿಗೂ ಸಮರ್ಪಕವಾಗಿ ನಿಯಮಿತವಾಗಿ ನೀರು ಹರಿಸುವ ವ್ಯವಸ್ಥೆಯನ್ನು ಕೈಗೊಳ್ಳಬೇಕು. ಪಂಪಾ ಉದ್ಯಾನವನದಲ್ಲಿರುವ ನೀರಿನ

3 ನೇ ಪುಟಕ್ಕೆ

ಜ್ಞಾನ ಭಾರತಂ ಮಿಷನ್‌ನ ಹಸ್ತಪ್ರತಿ ಸಮೀಕ್ಷೆಗೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ: ಡಾ.ಸುರೇಶ ಬಿ.ಇಟ್ನಾಳ



ಕೊಪ್ಪಳ ಏ.29-

ರಾಷ್ಟ್ರೀಯ ಹಸ್ತಪ್ರತಿ ಸಮೀಕ್ಷೆಯು ಮಾರ್ಚ್‌ನಲ್ಲಿ ಆರಂಭವಾಗಿದ್ದು ಮೇ 2026 ರವರೆಗೆ ನಡೆಯಲಿದೆ. ಸಮೀಕ್ಷೆಯ ಸಮರ್ಪಕ ಜಾರಿಗೆ ಸಂಬಂಧಿಸಿದ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿ ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಹೇಳಿದರು.

ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಖೆ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ದೇಶದಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈಬರಹದ ಪತ್ರಗಳು, ಹಸ್ತಪ್ರತಿಗಳು ಹಾಗೂ ಐತಿಹಾಸಿಕ ದಾಖಲೆಗಳನ್ನು ಸಂರಕ್ಷಿಸಿ ಡಿಜಿಟಲೀಕರಣ ಮಾಡುವ ಮಹತ್ತರ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಈ ಯೋಜನೆಯ ಮುಖ್ಯ ಉದ್ದೇಶವು ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಶಾಶ್ವತವಾಗಿ ಉಳಿಸುವುದರ ಜೊತೆಗೆ ಸಾರ್ವಜನಿಕರಿಗೆ ಒಂದೇ ರಾಷ್ಟ್ರೀಯ ವೇದಿಕೆಯ ಮೂಲಕ ಪ್ರವೇಶ ಕಲ್ಪಿಸುವುದಾಗಿದೆ. ಈ ಯೋಜನೆಯಡಿ ಹಸ್ತಪ್ರತಿಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ ಮತ್ತು ಪ್ರಕಟಣೆ ಕಾರ್ಯಗಳನ್ನು ಕೈಗೊಳ್ಳಲಾಗುತ್ತದೆ. ಕೇಂದ್ರ ಸರ್ಕಾರ ಅಭಿವೃದ್ಧಿಪಡಿಸಿರುವ ಮೊಬೈಲ್ ಅಪ್ಲಿಕೇಷನ್ ಮೂಲಕ ದೇಶದಾದ್ಯಂತ ಇರುವ ಹಸ್ತಪ್ರತಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಿ, ರಾಷ್ಟ್ರೀಯ ಹಸ್ತಪ್ರತಿ ಭಂಡಾರದಲ್ಲಿ ಸಂಗ್ರಹಿಸುವ ಮೂಲಕ ಜಾಗತಿಕ ಮಟ್ಟದಲ್ಲಿ ಹಂಚಿಕೊಳ್ಳುವ ಯೋಜನೆ ರೂಪಿಸಲಾಗಿದೆ. ಕೇಂದ್ರ ಸಂಸ್ಕೃತಿ ಮಂತ್ರಾಲಯದ ಮಾರ್ಗದರ್ಶನದಂತೆ, ಜಿಲ್ಲಾ ಮಟ್ಟದಲ್ಲಿ ಹಸ್ತಪ್ರತಿಗಳ ಸಮೀಕ್ಷೆ ಕಾರ್ಯಕ್ಕೆ ಹೆಚ್ಚಿನ ಪ್ರಚಾರ ಮತ್ತು ಜಾಗೃತಿ ಮೂಡಿಸಲು ಸೂಚನೆ ನೀಡಲಾಗಿದೆ. ಸಮೀಕ್ಷೆಯನ್ನು ಯಶಸ್ವಿಗೊಳಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡಲಾಗಿದೆ. ಅದರಂತೆ ಜಿಲ್ಲೆಯಲ್ಲಿನ ಹಸ್ತಪ್ರತಿಗಳ ಸಂಗ್ರಹಣೆಗೆ ಸಂಬಂಧಿಸಿದ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಎಂದು ಅವರು ಹೇಳಿದರು.

ಸಂಬಂಧಿಸಿದ ಅಧಿಕಾರಿಗಳು ಗ್ರಂಥಾಲಯಗಳು, ದೇವಾಲಯಗಳು, ಮಠಗಳು, ಶಿಕ್ಷಣ ಸಂಸ್ಥೆಗಳು ಹಾಗೂ ಖಾಸಗಿ ಸಂಗ್ರಹಗಳಲ್ಲಿ ಹಸ್ತಪ್ರತಿಗಳ ಗುರುತುಪಡಿಸುವಿಕೆ, ಸಂಗ್ರಹ ಸ್ಥಳಗಳಿಗೆ ಪ್ರವೇಶ ಕಲ್ಪಿಸಿ ಸಮೀಕ್ಷೆಗೆ ಸಹಕಾರ ಒದಗಿಸಬೇಕು. ದಾಖಲೀಕರಣ ಮತ್ತು ಪಟ್ಟಿಮಾಡುವಿಕೆ ಕಾರ್ಯಗಳಿಗೆ ಸಹಾಯ, ಸ್ಥಳೀಯ ಸಂಸ್ಥೆಗಳು ಹಾಗೂ ಸಂರಕ್ಷಕರಲ್ಲಿ ಜಾಗೃತಿ ಮೂಡಿಸುವಿಕೆ, ನಿಯಮಿತ ಪ್ರಗತಿ ವರದಿ ಸಲ್ಲಿಕೆ, ಅಗತ್ಯ ಆಡಳಿತಾತ್ಮಕ ಮತ್ತು ಲಾಜಿಸ್ಟಿಕ್ ಬೆಂಬಲ ಒದಗಿಸಬೇಕು. ತಂತ್ರಜ್ಞಾನ ಆಧಾರಿತ ವಿಧಾನದಲ್ಲಿ ಸಮೀಕ್ಷೆ ನಡೆಯಲಿದ್ದು, ದತ್ತಾಂಶದ ಗುಣಮಟ್ಟ ಮತ್ತು ನಕಲಿ ನಿವಾರಣೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗಿದೆ. ಸಂಗ್ರಹ ನಕ್ಷೆಗೊಳಿಸುವಿಕೆ, ಕ್ಷೇತ್ರ ಸಮೀಕ್ಷೆ, ಮೆಟಾಡೇಟಾ ದಾಖಲಾತಿ, ಡಿಜಿಟಲ್ ಅಪ್ಲೋಡ್ ಹಾಗೂ ಪರಿಶೀಲನೆ ಹಂತಗಳನ್ನು ಒಳಗೊಂಡಿದೆ. ಡಿಜಿಟಲ್ ಸೌಲಭ್ಯಗಳ ಕೊರತೆಯಿರುವ ಪ್ರದೇಶಗಳಲ್ಲಿ ಕೈಪಿಡಿ ಸಮೀಕ್ಷೆಯನ್ನೂ ನಡೆಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಮೀಕ್ಷೆಯು ಮಾರ್ಚ್ 2026ರಿಂದ ಆರಂಭವಾಗಿದ್ದು, ಮೇ 2026 ರವರೆಗೆ ಮೂರು ತಿಂಗಳ ಅವಧಿಯಲ್ಲಿ ಸಮೀಕ್ಷೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಇದರ ಫಲವಾಗಿ ರಾಜ್ಯವಾರು ಸಮಗ್ರ ಹಸ್ತಪ್ರತಿ ದತ್ತಾಂಶ ಭಂಡಾರ ನಿರ್ಮಾಣವಾಗುವುದರ ಜೊತೆಗೆ ಅಪರೂಪದ ಮತ್ತು ಅಪಾಯದಲ್ಲಿರುವ ಹಸ್ತಪ್ರತಿಗಳ ಗುರುತಿಸುವಿಕೆ ಸಾಧ್ಯವಾಗಲಿದೆ. ಜೊತೆಗೆ ಜಿಐಎಸ್ ಆಧಾರಿತ ರಾಷ್ಟ್ರೀಯ ಹಸ್ತಪ್ರತಿ ನಕ್ಷೆ ಅಭಿವೃದ್ಧಿಯಾಗಲಿದ್ದು, ಸಂರಕ್ಷಣೆಯಲ್ಲಿ ಸಂಸ್ಥೆಗಳು ಹಾಗೂ ಸಮುದಾಯದ ಪಾಲ್ಗೊಳ್ಳುವಿಕೆ ಹೆಚ್ಚಾಗಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಪುರಾತತ್ವ ಇಲಾಖೆಯ ಉಪನಿರ್ದೇಶಕ ಶ್ರೀಜೇಶ್ವರ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ನಾಗರಾಜ, ಆನೆಗುಂದಿಯ ರಾಜ ವಂಶಸ್ಥರಾದ ಶ್ರೀಕೃಷ್ಣ ದೇವರಾಯ, ವಿದ್ವಾನ್ ಶಿವರಾಮ್ ಕೃಷ್ಣಾನಂದ್ ಸ್ವಾಮೀಜಿ, ವಿದ್ವಾನ್ ಪ್ರಾಣೇಶಾಚಾರ್, ಕೊಪ್ಪಳ ಕ್ಲಸ್ಟರ್ ಕೇಂದ್ರದ ಸಂಯೋಜಕ ಪ್ರಮೋದ್ ಆಚಾರ್ಯ ಪೂಜಾರ್, ಗಂಗಾವತಿಯ ಪ್ರಾಚಾರ್ಯರು ಮತ್ತು ಇತಿಹಾಸ ಸಂಶೋಧಕರಾದ ಡಾ.ಶರಣಬಸಪ್ಪ ಕೋಲ್ಕಾರ್ ಡಾ.ರವಿ ಚವ್ಹಾಣ, ಕೊಪ್ಪಳದ ಉಪನ್ಯಾಸಕರು ಹಾಗೂ ಇತಿಹಾಸ ಸಂಶೋಧಕರಾದ ಡಾ.ಸಿದ್ದಲಿಂಗಪ್ಪ ಕೊಟ್ನೆಕಲ್, ಕನಕಗಿರಿ ಇತಿಹಾಸ ಸಂಶೋಧಕರಾದ ಡಾ.ಗೀತಾ ಪಾಟೀಲ್, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



ಕೆ.ಪಿ.ಎಂ.ಇ ನೋಂದಣಿ ಇಲ್ಲದೆ ಕ್ಲಿನಿಕ್ ಆರಂಭಿಸಿದರೆ ದಂಡ: ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ

ಬಳ್ಳಾರಿ,ಏ.29-

ವೈದ್ಯಕೀಯ ಪದವಿ ಪಡೆದ ನಂತರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ ಕಾಯ್ದೆಯಡಿ ನೋಂದಣಿ ಮಾಡಿಕೊಳ್ಳದೇ ಕ್ಲಿನಿಕ್ ಅಥವಾ ಆಸ್ಪತ್ರೆಗಳನ್ನು ಆರಂಭಿಸುವ ವೈದ್ಯರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು. ಮಂಗಳವಾರ ನಗರದ ನೂತನ ಜಿಲ್ಲಾಡಳಿತ ಭವನದ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ನೋಂದಣಿ ಮತ್ತು ಕುಂದುಕೊರತೆಗಳ ಸಭೆ'ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನೋಂದಣಿ ಕಡ್ಡಾಯ, ಉಲ್ಲಂಘಿಸಿದರೆ ದಂಡ: ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ 2007 ಮತ್ತು 2009ರ ತಿದ್ದುಪಡಿ ನಿಯಮಗಳ ಪ್ರಕಾರ, ಯಾವುದೇ ವೈದ್ಯರು ಕ್ಲಿನಿಕ್, ಪಾಲಿ ಕ್ಲಿನಿಕ್, ನರ್ಸಿಂಗ್ ಹೋಮ್ ಅಥವಾ ಪ್ರಯೋಗಾಲಯಗಳನ್ನು ಆರಂಭಿಸುವ ಮೊದಲು ಜಿಲ್ಲಾಧಿಕಾರಿಗಳಿಂದ ಕಡ್ಡಾಯವಾಗಿ ಕೆ.ಪಿ.ಎಂ.ಇ ನೋಂದಣಿ ಪ್ರಮಾಣಪತ್ರ ಪಡೆಯಬೇಕು. ನೋಂದಣಿ ಮಾಡಿಕೊಳ್ಳದೆ ಅಥವಾ ನವೀಕರಣ ಮಾಡದೆ ಸಂಸ್ಥೆ ನಡೆಸುತ್ತಿದ್ದರೆ, ಅಂತಹ ಕೇಂದ್ರಗಳಿಗೆ ಪ್ರತಿ ವರ್ಷಕ್ಕೆ 25,000 ರೂ.ಗಳಂತೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಸಿದ ಅವರು, ಕಾಯ್ದೆಯ ಕಲಂ 19, 20, 21 ಹಾಗೂ 22 ರಡಿ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

ನಕಲಿ ವೈದ್ಯರ ವಿರುದ್ಧ ಎಫ್‌ಐಆರ್: ಜಿಲ್ಲೆಯಲ್ಲಿ ಅಧಿಕೃತ ವೈದ್ಯಕೀಯ ಪದವಿ ಇಲ್ಲದೆ ಸಾರ್ವಜನಿಕರ ಆರೋಗ್ಯದೊಂದಿಗೆ ಚೆಲ್ಲಾಟವಾಡುವ ನಕಲಿ ವೈದ್ಯರ ಮೇಲೆ ತೀವ್ರ ನಿಗಾ ಇರಿಸಲಾಗಿದೆ. ಅಂತಹವರ ವಿರುದ್ಧ ನೇರವಾಗಿ ಎಫ್.ಐ.ಆರ್ ದಾಖಲಿಸಬೇಕು ಎಂದು ಆರೋಗ್ಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಟ್ಟಡ ಮಾಲೀಕರಿಗೆ ಸೂಚನೆ: ತಮ್ಮ ಮನೆ ಅಥವಾ ಮಳಿಗೆಗಳನ್ನು ಆಸ್ಪತ್ರೆ, ಕ್ಲಿನಿಕ್ ಅಥವಾ ಲ್ಯಾಬ್‌ಗಳಿಗೆ ಬಾಡಿಗೆ ನೀಡುವ ಮುನ್ನ ಮಾಲೀಕರು ಎಚ್ಚರಿಕೆ ವಹಿಸಬೇಕು. ಬಾಡಿಗೆದಾರರ ಅಧಿಕೃತ ವೈದ್ಯಕೀಯ ಪ್ರಮಾಣಪತ್ರಗಳನ್ನು ಪರಿಶೀಲಿಸಿದ ನಂತರವೇ ಬಾಡಿಗೆ ಒಪ್ಪಂದ ಮಾಡಿಕೊಳ್ಳಬೇಕು ಎಂದು ತಿಳಿಸಿದರು. ಜಿಲ್ಲೆಯ ಆರೋಗ್ಯ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಲು ಮತ್ತು ಸಾರ್ವಜನಿಕರಿಗೆ ಗುಣಮಟ್ಟದ ಚಿಕಿತ್ಸೆ ಖಾತ್ರಿಪಡಿಸಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು ಆರೋಗ್ಯ ಅಧಿಕಾರಿಗಳು, ನೋಂದಣಿ ಮತ್ತು ಕುಂದು ಕೊರತೆ ಪರಿಹಾರ ಸಮಿತಿ ಸದಸ್ಯರು ಉಪಸ್ಥಿತರಿದ್ದರು.



ಎಸ್ಸೆಸ್ಸೆಲ್ಸಿ ಪರೀಕ್ಷೆ : ವಸತಿ ಶಾಲೆಗಳಲ್ಲಿ ಶೇ. 98.24 ರಷ್ಟು ಫಲಿತಾಂಶ

ಕಲಬುರಗಿ,ಏ.29-

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಅಡಿಯಲ್ಲಿರುವ ಕಲಬುರಗಿ ಜಿಲ್ಲೆಯ ವಸತಿ ಶಾಲೆಗಳು 2025-26 ನೇ ಸಾಲಿನ ಎಸ್ಸೆ ಸೆಲ್ಸಿ ವಾರ್ಷಿಕ ಪರೀಕ್ಷೆ-1 ರಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದು, ಒಟ್ಟಾರೆ ಶೇ. 98.24 ರಷ್ಟು ಫಲಿತಾಂಶ ದಾಖಲಿಸಿವೆ. ಇದರ ಪ್ರಯುಕ್ತ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಝಿಯಾ ತರನ್ನುಮ್ ಅವರು ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರ ಮುಂದಿನ ಶೈಕ್ಷಣಿಕ ಅಭ್ಯಾಸಕ್ಕೆ ಶುಭ ಹಾರೈಸಿದ್ದಾರೆ.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಇಂದಿರಾಗಾಂಧಿ, ಡಾ.ಬಿ.ಆರ್ ಅಂಬೇಡ್ಕರ್ ವಸತಿ ಶಾಲೆ ಸೇರಿದಂತೆ ಒಟ್ಟು 43 ವಸತಿ ಶಾಲೆಗಳಲ್ಲಿ 27 ಶಾಲೆಗಳು ನೂರಕ್ಕೆ ನೂರು ಫಲಿತಾಂಶ ಪಡೆದಿವೆ. ಅಂಕಗಳಿಕೆಯಲ್ಲಿ ಪ್ರತಿಭಾನ್ವಿತ ಬಾಲಕಿಯರ ವಸತಿ ಶಾಲೆ (521) ಕಲಬುರಗಿ ವಸತಿ ಶಾಲೆಯ ವಿದ್ಯಾರ್ಥಿಯಾದ ಭಾಗ್ಯಶ್ರೀ ದಯಾನಂದ 620 (ಶೇ. 99.20) ಅಂಕ ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಹೆಬ್ಬಾಳ ಮೊರಾರ್ಜಿ ದೇಸಾಯಿ (ಹಿಂ.ವ 313) ವಸತಿ ಶಾಲೆಯ ಶ್ವೇತಾ 619 (ಶೇ. 99.04) ರಷ್ಟು ಅಂಕ ಪಡೆದು ದ್ವಿತೀಯ ಸ್ಥಾನ ಪಡೆದಿದ್ದು, ಬಿಳವಾರ(ಇಜೇರಿ) ಡಾ.ಬಿ.ಆರ್ ಅಂಬೇಡ್ಕರ್ (ಪ.ಜಾ. 812) ವಸತಿ ಶಾಲೆಯ ಅಂಕಿತಾ 615 (ಶೇ. 98.40) ರಷ್ಟು ಅಂಕ ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

ಪರೀಕ್ಷೆಯಲ್ಲಿ ಅತ್ಯುತ್ತಮ ಫಲಿತಾಂಶ ಸಾಧನೆ ಮಾಡಿದ ವಿದ್ಯಾರ್ಥಿಗಳು ಮತ್ತು ಫಲಿತಾಂಶಕ್ಕಾಗಿ ಶ್ರಮಿಸಿದ ವಸತಿ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಹಾಗೂ ಪ್ರಾಂಶುಪಾಲರಿಗೆ ಸಮಾಜ ಕಲ್ಯಾಣ ಇಲಾಖೆಯ ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಈರಣ್ಣಾ ಆಶಾಪೂರ್ ಹಾಗೂ ಜಿಲ್ಲಾ ಕ್ರೈಸ್ ಸಮನ್ವಯಾಧಿಕಾರಿ ನವೀದ್ ಅಂಜುಮ್ ಅಭಿನಂದಿಸಿದ್ದಾರೆ.

ಕ್ರೈಸ್ ವಸತಿ ಶಾಲೆಗಳಲ್ಲಿ ಅತ್ಯುತ್ತಮ ಬೋಧಕ ಸಿಬ್ಬಂದಿ ವರ್ಗ, ಉಚಿತ ಊಟ ವಸತಿ, ಪಠ್ಯಪುಸ್ತಕ, ಲೇಖನ ಸಾಮಗ್ರಿ, ಸಮವಸ್ತ್ರ ಸುಸಜ್ಜಿತ ಪ್ರಯೋಗಾಲಯ,

ಕಂಪ್ಯೂಟರ್ ಮತ್ತು ಸಂಗಿತ ಶಿಕ್ಷಣ ಮುಂತಾದ ಸೌಲಭ್ಯಗಳನ್ನು ಒದಗಿಸುತ್ತಿದ್ದು, ಪೋಷಕರು ವಸತಿ ಶಾಲೆಗಳಿಗೆ ತಮ್ಮ ಮಕ್ಕಳನ್ನು ದಾಖಲಿಸುವ ಮೂಲಕ ಅತ್ಯುತ್ತಮ ಗುಣಮಟ್ಟದ ಆಂಗ್ಲ ಮಾಧ್ಯಮ ಶಿಕ್ಷಣವನ್ನು ಪಡೆದುಕೊಳ್ಳಬೇಕೆಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರೀತಿ ದೊಡ್ಡಮನಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಜೃಂಭಣೆಯ ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವಕ್ಕೆ ಸಕಲ ಸಿದ್ದತೆ

ಭಕ್ತಾದಿಗಳಿಗೆ ಸುಸಜ್ಜಿತ ಮೂಲಭೂತ ಸೌಕರ್ಯಕ್ಕೆ ಕ್ರಮ: ಸಂಸದ ಕೆ.ರಾಜಶೇಖರ ಹಿಟ್ನಾಳ

ಕೊಪ್ಪಳ ಏ.29-

ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ 2026ನೇ ಸಾಲಿನ ವಾರ್ಷಿಕ ಜಾತ್ರಾ ಮಹೋತ್ಸವವನ್ನು ಅತ್ಯಂತ ವಿಜೃಂಭಣೆಯಿದ ಆಚರಿಸಲಾಗುತ್ತಿದ್ದು, ಶ್ರೀ ಕ್ಷೇತ್ರಕ್ಕೆ ಆಗಮಿಸುವ ಭಕ್ತಾದಿಗಳಿಗೆ ಸುಸಜ್ಜಿತವಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸಬರಾಜ ಹಿಟ್ನಾಳ ಹೇಳಿದರು.

2026ರ ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಶ್ರೀ ಕ್ಷೇತ್ರಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳ ಕಛೇರಿ ಸಭಾಂಗಣದಲ್ಲಿ ಏಪ್ರಿಲ್ 28ರಂದು ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರವು ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಿದ್ದು, ಇದರಿಂದ ಶ್ರೀ ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಕಾಮಗಾರಿಗಳಾಗುತ್ತಿವೆ. ಕಳೆದ ವರ್ಷದಂತೆ ಈ ಬಾರಿಯೂ ಭಕ್ತಾದಿಗಳಿಗೆ ಸಕಲ ಸೌಲಭ್ಯಗಳನ್ನು ಕಲ್ಪಿಸಿ ಅದ್ದೂರಿಯಾಗಿ ಜಾತ್ರಾ ಮಹೋತ್ಸವವನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. 2026ನೇ ಸಾಲಿನ ಜಾತ್ರಾ ಮಹೋತ್ಸವವು ಮೇ 2 ರಿಂದ ಮೇ 14ರವರೆಗೆ ಪ್ರಮುಖ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ ಮತ್ತು ಜಾತ್ರಾ ಮಹೋತ್ಸವವು ಸುಮಾರು ಒಂದು ತಿಂಗಳ ಕಾಲ ಜರುಗಲಿದ್ದು, ಈ ಸಮಯದಲ್ಲಿ ಕರ್ನಾಟಕದಾದ್ಯಂತ ಹಾಗೂ ಆಂಧ್ರ, ಮಹಾರಾಷ್ಟ್ರ ಹಾಗೂ ಇನ್ನಿತರೆ ಪ್ರದೇಶಗಳಿಂದ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತಾದಿಗಳು ಶ್ರೀ ದೇವಿಯವರ ದರ್ಶನವನ್ನು ಪಡೆಯಲು ಆಗಮಿಸಲಿದ್ದಾರೆ ಎಂದರು.



ಕಳೆದ ವರ್ಷ ಜಾತ್ರೆಗೆ ಬರುವವರ ಸಂಖ್ಯೆಯನ್ನು ಲೆಕ್ಕಿಸಲು ಮಾಬ್ ಕೌಂಟಿಗ್ ಮಷಿನ್ ಅಳವಡಿಸಲಾಗುತ್ತು. ಜಾತ್ರಾ ಅವಧಿಯಲ್ಲಿ ಸುಮಾರು 28 ಲಕ್ಷ ಜನರು ಅಮ್ಮನ ದರ್ಶನ ಪಡೆದಿದ್ದಾರೆ. ಈ ಬಾರಿ 30 ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯ ಭಕ್ತಾದಿಗಳು ಆಗಮಿಸುವ ನಿರೀಕ್ಷೆಯಿದೆ. ಹುಲಗಿ ಕ್ಷೇತ್ರಕ್ಕೆ ಬರುವಂತ ಭಕ್ತಾದಿಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಅರವಟ್ಟಿಗೆ ವ್ಯವಸ್ಥೆ, 100 ತಾತ್ಕಾಲಿಕ ಶೌಚಾಲಯ ವ್ಯವಸ್ಥೆ, ವಿಶೇಷ ದರ್ಶನ, ಸರ್ವರಿಗೂ ದರ್ಶನ ವ್ಯವಸ್ಥೆ, ವಾಹನಗಳ ಪಾರ್ಕಿಂಗ್ ವ್ಯವಸ್ಥೆ, ತುಂಗಭದ್ರ ಶಾಲೆಯಿಂದ ಮತ್ತು ಕೋರಮಂಡಲ್ ಫ್ಯಾಕ್ಟರಿಯಿಂದ ದೇವಸ್ಥಾನದ ಹಿಂಭಾಗದ ವರೆಗೆ ಭಕ್ತರು ಬರಲು ಉಚಿತ ಸಾರಿಗೆ ವ್ಯವಸ್ಥೆಯನ್ನು ಮಾಡಲಾಗುತ್ತಿದೆ. ಇದಲ್ಲದೆ ಮೇ 2 ರಿಂದ ಒಂದು ತಿಂಗಳುಗಳ ಕಾಲ ಮಹಾ ದಾಸೋಹ ಹಮ್ಮಿಕೊಂಡಿದ್ದು, ಭಕ್ತಾದಿಗಳಿಗೆ ಪ್ರಸಾದ ವಿತರಣೆಯನ್ನು ಅಚ್ಚುಕಟ್ಟಾಗಿ ಮಾಡಲಾಗುವುದು ಎಂದು ಹೇಳಿದರು.

ತಾತ್ಕಾಲಿಕ ವೈದ್ಯಕೀಯ ಶಿಬಿರಗಳನ್ನು ತೆರೆದು ಭಕ್ತಾಧಿಗಳಿಗೆ ಚಿಕಿತ್ಸೆ ನೀಡುವ ವ್ಯವಸ್ಥೆಯನ್ನು ಸಹ ಮಾಡಲಾಗಿದ್ದು, 2 ಆಂಬ್ಯುಲೆನ್ಸ್ ವ್ಯವಸ್ಥೆ ಹಾಗೂ ತುರ್ತು ಅವಘಡಗಳ ನಿಯಂತ್ರಣಕ್ಕೆ ಅಗ್ನಿ ಶಾಮಕ ವಾಹನವನ್ನು ಕಾಯ್ದಿರಿಸಿಕೊಳ್ಳಲಾಗುವುದು. ಹೆಚ್ಚುವರಿ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗುವುದು, ಮತ್ತು ಸೂಕ್ಷ್ಮ ಪ್ರದೇಶದಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲು ಕ್ರಮ ಅನುಸರಿಸಲಾಗುವುದು. ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲು ಯೋಜನೆ ರೂಪಿಸಲಾಗಿದೆ. 7 ಎಂ.ಎಲ್.ಡಿ ನೀರನ್ನು ಪಡೆಯಲು ನೀರಾವರಿ ಇಲಾಖೆಗೆ ಮಂಜೂರಾತಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಜಾತ್ರಾ ಮಹೋತ್ಸವದಲ್ಲಿ, ಮಹಾ ದಾಸೋಹ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಮತ್ತು ಮಹಾದಾಸೋಹ, ಅಭಿವೃದ್ಧಿ ಕಾಮಗಾರಿ ಕೆಲಸಕ್ಕೆ ಉದಾರವಾಗಿ ದೇಣಿಗೆಯನ್ನು ನೀಡಿ ಸಹಕರಿಸುವಂತೆ ಸಂಸದರು ಇದೇ ವೇಳೆ ಮನವಿ ಮಾಡಿಕೊಂಡರು.

ವಿವಿಧ ಅಭಿವೃದ್ಧಿ ಕಾಮಗಾರಿಗಳು: ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಕೊಳ್ಳಲಾಗಿದ್ದು, ರೂ. 985 ಲಕ್ಷಗಳ ಅಂದಾಜು ಮೊತ್ತದ ಅಮ್ಮಾ ನಿಲಯ ವಸತಿ ಸಂಕೀರ್ಣ 2 3 ನೇ ಮಹಡಿ ನಿರ್ಮಾಣ ಕಾಮಗಾರಿಗೆ ರೂ. 492.50 ಲಕ್ಷಗಳನ್ನು ಪ್ರಾಧಿಕಾರದಿಂದ ಒದಗಿಸಲಾಗಿದೆ. ರೂ. 999.50 ಲಕ್ಷಗಳ ಅಂದಾಜು ಮೊತ್ತದಲ್ಲಿ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಹಾಲಿ ಕಟ್ಟಡವನ್ನು ತೆರವುಗೊಳಿಸಿ ನೂತನ ದೇವಸ್ಥಾನ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, ರೂ. 250 ಲಕ್ಷ ಗಳನ್ನು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಬಿಡುಗಡೆ ಮಾಡಲಾಗಿದೆ.


ಅದೇ ರೀತಿ ಮಹಾನಕ್ಷೆಯಲ್ಲಿ ಸೂಚಿಸಿರುವಂತೆ ವಿವಿಧ 04 ಕಡೆ ದೇವಸ್ಥಾನದ ಭಕ್ತಾಧಿಗಳ ಅನುಕೂಲಕ್ಕಾಗಿ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಶೌಚಾಲಯ ಮತ್ತು ಸ್ನಾನ ಗೃಹ ನಿರ್ಮಾಣ ಕಾಮಗಾರಿಗಳನ್ನು ರೂ. 340 ಲಕ್ಷಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲಾಗಿದ್ದು, ರೂ. 170 ಲಕ್ಷಗಳನ್ನು ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಿಂದ ಬಿಡುಗಡೆ ಮಾಡಿದೆ. ಅಲ್ಲದೇ ಮಹಾ ನಕ್ಷೆಯ ಪ್ರಕಾರ ರೂ. 1,780 ಲಕ್ಷ ಅಂದಾಜು ಮೊತ್ತದ ಕುಡಿಯುವ ನೀರು ಸರಬುರಾಜು ಒಳಚರಂಡಿ ನಿರ್ಮಾಣ ಕಾಮಗಾರಿ ಮತ್ತು ರೂ. 2,950 ಲಕ್ಷ ಅಂದಾಜು ಮೊತ್ತದ ನೀರು ಸರಬರಾಜು ಒಳಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಸಂಬಧಿಸಿದತೆ ಡಿಪಿಆರ್ ಯೋಜನೆ ಪ್ರಾಧಿಕಾರದ ಪರಿಶೀಲನೆಯಲ್ಲಿರುತ್ತದೆ. ಕ್ಷೇತ್ರದ ಎರಡು ಕಡೆ ಸುಲಭ ಶೌಚಾಲಯ ನಿರ್ಮಾಣ ಕಾಮಗಾರಿಯನ್ನು ಈಗಾಗಲೇ ಪ್ರಾರಂಭಿಸಲಾಗಿರುತ್ತದೆ ಎಂದು ಸಂಸದರು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಹೆಚ್.ಪ್ರಕಾಶ್‌ರಾವ್, ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ, ಮುಖಂಡರಾದ ಪಾಲಾಕ್ಷಪ್ಪ ಗುಂಗಾಡಿ, ಈರಣ್ಣ ಈಳಿಗೇರ ಸೇರಿದಂತೆ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

ಮೇ1 ರಂದು ಬುದ್ಧ ಪೂರ್ಣಿಮೆಯ ನಿಮಿತ್ತ ಅನ್ನ ಸಂತರ್ಪಣೆ: ಗಣೇಶ ವಳಕೇರಿ

ಕಲಬುರಗಿ,ಏ.29-

ಬುದ್ಧ ಪೂರ್ಣಿಮೆಯ ಅಂಗವಾಗಿ ಸಮಾಜ ಸೇವಕ ಸುರೇಶ ಎಂ. ವಳಕೇರಿ ಅವರ ನೇತೃತ್ವದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಕೂಡ ಮೇ 1ರಂದು ವಿಶೇಷ ಅನ್ನ ಸಂತ ರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಮಾಜಿ ಸದಸ್ಯ ಗಣೇಶ ವಳಕೇರಿ ಹೇಳಿದರು.



ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೇಡಂ ಮುಖ್ಯ ರಸ್ತೆ ಬಳಿ ಇರುವ ಸಾರ್ವಜನಿಕ ಸರ್ಕಾರಿ ಆಸ್ಪತ್ರೆ ಮುಂಭಾಗದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಸುರೇಶ ಎಂ. ವಳಕೇರಿ ಅವರು ತಮ್ಮ ಕುಟುಂಬದ ವತಿಯಿಂದ ಈ ಸೇವಾ ಕಾರ್ಯವನ್ನು ಮುಂದುವರೆ ಸುತ್ತಿದ್ದು, ಸಾರ್ವಜನಿಕರು, ಆಸ್ಪತ್ರೆಯ ರೋಗಿಗಳ ಸಹವರ್ತಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಅನ್ನ ಪ್ರಸಾದವನ್ನು ಸ್ವೀಕರಿಸಬೇಕು ಎಂದು ಮನವಿ ಮಾಡಿದರು.

ಪ್ರಮುಖ ಅತಿಥಿಗಳಾಗಿ ದಕ್ಷಿಣ ಮತಕ್ಷೇತ್ರದ ಶಾಸಕರಾದ ಅಲ್ಲಮ ಪ್ರಭು ಪಾಟೀಲ, ಬಿ.ಆರ್. ಪಾಟೀಲ, ಬಸವರಾಜ ಮತ್ತಿಮಡು, ವಿಧಾನ ಪರಿಷತ್ ಸದಸ್ಯ ಶಶೀಲ ನಮೋಶಿ, ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ್ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ.

ಇದರೊಂದಿಗೆ ಪೊಲೀಸ್ ತರಬೇತಿ ಮಹಾವಿದ್ಯಾಲಯದ ಡಿಐಜಿಪಿ ಹಾಗೂ ಪ್ರಾಂಶುಪಾಲ ಎಂ. ಪುಟ್ಟಮಾದಯ್ಯ, ಎಎಸ್‌ಪಿ ಡಿ. ರಾಜಣ್ಣ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಾರ್ವಜನಿಕ ಮುಖಂಡರು, ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಕಾರ್ಯ ಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರಾದ ಪಿಡ್ಡಪ್ಪ ಜಾಲಗಾರ, ರಾಜೇಶ ಗುತ್ತೇದಾರ್ ವಿಜಯಕುಮಾರ ಸಂಕಾ, ಪ್ರಕಾಶ್ ಒಂಟಿ, ಸುರೇಶ್ ವಳಕೇರಿ, ಮತ್ತಿತರರು ಉಪಸ್ಥಿತರಿದ್ದರು.

ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಶ್ರಮಿಸಿ: ಶ್ರೀನಿವಾಸ ನವಲೆ

ಚಿತ್ತಾಪುರ,ಏ.29-

ನಗರ, ಗ್ರಾಮೀಣ ಪ್ರದೇಶದಲ್ಲಿ ಬಹುತೇಕ ಕುಟುಂಬಗಳು ತಮ್ಮ ಬಡತನದ ಕಾರಣಕ್ಕೆ ಅಪ್ರಾಪ್ತ ಮಕ್ಕಳನ್ನು ದುಡಿಯಲು ಕಳುಹಿಸಿ, ಬಾಲ ಕಾರ್ಮಿಕ ಪದ್ಧತಿಗೆ ದೂಡಲಾಗುತ್ತಿದೆ. ಅವರ ಬಾಲ್ಯವನ್ನು ರಕ್ಷಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಮತ್ತು ಜಿಲ್ಲಾ ಹಿರಿಯ ಸಿವಿಲ್ ನ್ಯಾಯಧೀಶ ಶ್ರೀನಿವಾಸ ನವಲೆ ಹೇಳಿದರು. ಪಟ್ಟಣದ ತಾಲೂಕು ಪಂಚಾ ಯಿತಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ನೇತೃತ್ವದಲ್ಲಿ ಬಾಲ್ಯ ವಿವಾಹ ಮತ್ತು ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಯ ಕುರಿತು ತಾಲೂಕಿನ ಗ್ರಾ.ಪಂ.ಪಿಡಿಒಗಳಿಗೆ ಹಮ್ಮಿಕೊಂಡ ಒಂದು ದಿನದ ಉಚಿತ ಕಾನೂನು ಅರಿವು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ ಕಾರ್ಮಿಕ ಪದ್ಧತಿ ನಿಷೇಧ: 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಉದ್ಯೋಗದಲ್ಲಿ ತೊಡಗಿಸಿಕೊಳ್ಳುವುದನ್ನು ಬಾಲ ಕಾರ್ಮಿಕ ಕಾಯ್ದೆ ನಿಷೇಧಿಸುತ್ತದೆ. 14ರಿಂದ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಕೆಲಸಗಳಲ್ಲಿ ಬಳಸುವಂತಿಲ್ಲ.

ಆದರೂ ಪಾಲಕರು ಬಡವರು ಎನ್ನುವ ಕಾರಣ ಕೊಟ್ಟು ಮಕ್ಕಳನ್ನು ಬಾಲಕಾರ್ಮಿ ಕರನ್ನಾಗಿ ಮಾಡುತ್ತಿದ್ದಾರೆ. ಇಂತಹ ಕಾರಣ ಹೇಳುವ ತಂದೆ ತಾಯಿಗಳಿಗೆ ಇದರ ಬಗ್ಗೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಪಿಡಿಓಗಳಿಗೆ ಸೂಚಿಸಿದರು.

ಬಾಲ್ಯ ವಿವಾಹ ನಿಷೇಧ: 18 ವರ್ಷದೊಳಗಿನ ಹೆಣ್ಣು ಮಕ್ಕಳು ಮತ್ತು 21 ವರ್ಷದೊಳಗಿನ ಗಂಡು ಮಕ್ಕಳಿಗೆ ವಿವಾಹ ಮಾಡುವುದು ಕಾನೂನು ಬಾಹಿರವಾಗಿದೆ. ಬಾಲ್ಯ ವಿವಾಹ ಮಾಡುವುದು, ಮಾಡಿಸುವುದು ಅಥವಾ ಪ್ರೇರೇಪಿಸುವುದು ಬಾಲ್ಯ ವಿವಾಹ ನಿಷೇಧ ಕಾನೂನು ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದೆ. ಆದರೂ ಗ್ರಾಮೀಣ ಪ್ರದೇಶಗಳಲ್ಲಿ ಬಾಲ್ಯ ವಿವಾಹ ಕಂಡು ಬರುತ್ತಿವೆ. ಆದ್ದರಿಂದ ಬಾಲ್ಯ ವಿವಾಹ ಪಿಡಿಓಗಳ ಗಮನಕ್ಕೆ ಬಂದರೇ ತಕ್ಷಣ ಮಕ್ಕಳ ಹಕ್ಕುಗಳ ಆಯೋಗ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಗಮನಕ್ಕೆ ತಂದ್ದು, ಅಧಿಕಾರಿಗಳ ಜೊತೆ ನಿಂತು, ಬಾಲ್ಯ ವಿವಾಹ ತಡೆಯಬೇಕಾಗಿದೆ ಎಂದು ಪಿಡಿಓಗಳಿಗೆ ತಾಕೀತು ಮಾಡಿದರು.

ಮನರೇಗಾ ತಾಲೂಕು ಸಹಾಯಕ ನಿರ್ದೇಶಕ ಪಂಡಿತ ಸಿಂಧೆ, ಶ್ರೀಮಂತ ಸಂಗಾವಿ ಇದ್ದರು.

ಜೆಸ್ಕಾಂ: ಹತ್ತಿರದ ಶಾಖೆಗೆ ಹಣ ಪಾವತಿಸಿ ರಶೀದಿ ಪಡೆಯಿರಿ

ಬಳ್ಳಾರಿ,ಏ.29-

ಬಳ್ಳಾರಿ ಗ್ರಾಮೀಣ ಜೆಸ್ಕಾಂ ಉಪ-ವಿಭಾಗ ವ್ಯಾಪ್ತಿಯ ಜೆಸ್ಕಾಂ ಕಂಪನಿಯ ಸಾಫ್ಟ್ ವೇರ್‌ನಲ್ಲಿ ತಾಂತ್ರಿಕ ದೋಷದಿಂದ ಆನ್‌ಲೈನ್ ಪಾವತಿಯ ವ್ಯತ್ಯಾಸದಲ್ಲಿ ಲೋಪ್-ದೋಷಗಳು ಕಂಡುಬದಿರುವುದರಿಂದ, ಎಲ್ಲಾ ಗ್ರಾಹಕರು ಹತ್ತಿರದ ಶಾಖೆ ಅಥವಾ ತಮ್ಮ ಗ್ರಾಮದ ವಿದ್ಯುತ್ ಪ್ರತಿನಿಧಿ (ಜಿವಿಪಿ), ಗ್ರಾಮೀಣ ಉಪ-ವಿಭಾಗ ಕಚೇರಿಗೆ ಭೇಟಿ ನೀಡಿ ಹಣ ಪಾವತಿಸಿ ರಸೀದಿ ಪಡೆದುಕೋಳ್ಳಬಹುದು ಎಂದು ಬಳ್ಳಾರಿ ಗ್ರಾಮೀಣ ಜೆಸ್ಕಾಂ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಮೋಹನ ಬಾಬು ಪ್ರಕಟಣೆಯಲ್ಲಿ ಕೋರಿದ್ದಾರೆ.

ಒಂದನೇಯ ಪುಟದಿಂದ

ನೀಟ್ ಪರೀಕ್ಷಾ ಪೂರ್ವಭಾವಿ ಸಭೆ

ಪಾರದರ್ಶಕ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಿ:ಎಡಿಸಿ ಶಿವಾನಂದ

ಒದಗಿಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾರ್ಥಿಗಳ ತಪಾಸಣಾ ಕಾರ್ಯಕ್ಕೆ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಬೇಕು. ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕೈಗೊಳ್ಳಬೇಕು ಎಂದು ರಾಯಚೂರಿನ ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾರಾದ ದೀಪಾಶ್ರೀ ಅವರು ಸಭೆಗೆ ಮಾಹಿತಿ ನೀಡಿದರು.

11 ಪರೀಕ್ಷಾ ಕೇಂದ್ರಗಳು: ನೀಟ್ ಪರೀಕ್ಷೆಗೆ ಜಿಲ್ಲೆಯಲ್ಲಿ 3,744 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಲಾಗಿದ್ದು, ರಾಯಚೂರು ನಗರದ 11 ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದೆ. ಮೇ.03ರ ಮಧ್ಯಾಹ್ನ 2 ರಿಂದ ಸಂಜೆ 5ಗಂಟೆಯವರೆಗೆ ಪರೀಕ್ಷೆ ನಡೆಯಲಿದ್ದು, ಪರೀಕ್ಷೆ ಕೇಂದ್ರಕ್ಕೆ ವಿದ್ಯಾರ್ಥಿಗಳು ಅಂದು ಬೆಳಿಗ್ಗೆ 11 ರಿಂದ 1.30ರೊಳಗಾಗಿ ಹಾಜರಾಗಬೇಕೆಂದು ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾರು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ವಿಭಾಗದ ನಿಯಂತ್ರಣಾಧಿಕಾರಿ ಚಂದ್ರಶೇಖರ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವೀರೇಶ ನಾಯಕ, ಕೇಂದ್ರೀಯ ವಿದ್ಯಾಲಯದ ಶಿಕ್ಷಕ ಪವನ ಪಾಂಡೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರಪ್ಪ ಹೋಕ್ರಾಣಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೆ.ಡಿ.ಬಡಿಗೇರ, ಯರಮರಸ್ ಆದರ್ಶ ವಿದ್ಯಾಲಯದ ಪ್ರಾಂಶುಪಾಲ ಮಹಮದ್ ಅಬ್ದುಲ್ ಯಾನಿಸಿ, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಶ್ರೀದೇವಿ, ರಾಯಚೂರಿನ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ವೆಂಕಣ್ಣ, ಉಪನ್ಯಾಸಕ ರವಿ ಮೇಸ್ತ್ರಿ ಸೇರಿದಂತೆ ವಿವಿಯ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು ಸಭೆಯಲ್ಲಿ ಇದ್ದರು.

ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದಿಂದ ಜಿಲ್ಲಾಧಿಕಾರಿ ನಿತೀಶ್ ಕೆರಿಗೆ ಸನ್ಮಾನ

ಶ್ರೀನಿವಾಸ್,ಅಮರೇಗೌಡ, ಬಂದೋಲಿ ,ಅನಸೂಯಾ ಅವಲ್ದಾರ್ ಗುಂಜಳ್ಳಿ ರಾಮಾದೇವಿ ದಿನ್ನಿ ವೀರೇಂದ್ರ ಪಾಟೀಲ್ ವೀರೇಶ್ ಅಂಗಡಿ ವಿರುಪಾಕ್ಷಪ್ಪ ಕೋನಾಪುರ್ಪೇಟೆ ರಾಧಾಕೃಷ್ಣ, ಜಿಲ್ಲಾ ಪದಾಧಿಕಾರಿಗಳು ಮತ್ತು ತಾಲೂಕಿನ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಜಿಲ್ಲೆಯ ಮುಖ್ಯೋಪಾಧ್ಯಾಯರು ಸಹ ಉಪಸ್ಥಿತರಿದ್ದರು.

ಮಾನ್ವಿ ಪಟ್ಟಣದಲ್ಲಿ ಸಮಸ್ಯೆಗಳ ಸರಮಾಲೆ : ಜನತೆಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಬಿಜೆಪಿ ಮನವಿ

ಮೇಲ್ತೊಟ್ಟಿ (ಟ್ಯಾಂಕ್)ಗೆ ನೀರನ್ನು ಪಂಪ್ ಮಾಡಲು ನೀರಂತರ ವಿದ್ಯುತ್ ಸಮಸ್ಯೆಯಿದ್ದು ದಿನಕ್ಕೆ ಸುಮಾರು 30 ಬಾರಿ ವಿದ್ಯುತ್ ನಿಲುಗಡೆ ಆಗುತ್ತಿದ್ದರು ಅಲ್ಲಿರುವಂತಹ 63 ಕೆ.ವಿ.ಎ ಜನರೇಟರನ್ನು ಕಳೆದ 10 ವರ್ಷಗಳಿಂದ ದುರಸ್ತಿ ಮಾಡದೆ ಸಾರ್ವಜನಿಕರಿಗೆ ಉದ್ದೇಶಪೂರ್ವಕವಾಗಿ ನೀರಿನ ಸಮಸ್ಯೆಯನ್ನು ಮುಖ್ಯಾಧಿಕಾರಿಗಳು ಸೃಷ್ಟಿ ಮಾಡುತ್ತಿದ್ದಾರೆ. ಪಂಪಾ ಹೌಸಿಂಗ್ ಕಾಲೋನಿಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಹಾಕುತ್ತಿರುವ ಕಸ ಸ್ವಚ್ಛಗೊಳಿಸುತ್ತಿಲ್ಲ ಅದೇ ರೀತಿಯಾಗಿ ಇನ್ನಿತರ ಸಾರ್ವಜನಿಕ ಸ್ಥಳಗಳಾದ ಟಿಎಪಿಸಿಎಂಎಸ್, ಅಮರೇಗೌಡ ಕಾಂಪ್ಲೆಕ್ಸ್ ಹಿಂದುಗಡೆ, ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು, ಸ್ಟೇಡಿಯಂ ಸುತ್ತಮುತ್ತ ಮತ್ತು 3 ಕಿ.ಮೀ ಉದ್ದದ ತುಂಗಭದ್ರಾ ಉಪ ವಿತರಣಾ ಕಾಲುವೆ 2 ಬದಿಗಳು ಸೇರಿದಂತೆ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿನ ಕಸವನ್ನು ನಿಯಮಿತವಾಗಿ ಸ್ವಚ್ಛಗೊಳಿಸಬೇಕು. ಬಸ್ ಸ್ಟ್ಯಾಂಡ್ ಎದುರುಗಡೆ ಇರುವ ರೈತ ಭವನ ಕಟ್ಟಡ ಪುರಸಭೆ ಸುಪರ್ದಿಯಲ್ಲಿದ್ದು ಕಟ್ಟಡ ಸ್ವಚ್ಛಗೊಳಿಸಿ ಹಣ್ಣು, ಹೂ ಮತ್ತು ತರಕಾರಿ ವ್ಯಾಪಾರಿಗಳಿಗೆ ಸ್ಥಳ ನಿಗದಿಪಡಿಸಿ ಮುಖ್ಯ ರಸ್ತೆಯನ್ನು ಸುಗಮ ಸಂಚಾರಕ್ಕಾಗಿ ಮುಕ್ತಗೊಳಿಸಬೇಕು. ನಗರದ ಎಲ್ಲಾ ವಾರ್ಡಗಳಲ್ಲಿ ಚರಂಡಿ ವ್ಯವಸ್ಥೆ ಸರಿಪಡಿಸಬೇಕು ಮತ್ತು ಸ್ವಚ್ಛಗೊಳಿಸಬೇಕು. ಪಟ್ಟಣದಲ್ಲಿ ಪುರಸಭೆಯಿಂದ ಪರವಾನಿಗೆ ಪಡೆಯದೆ ಕಾರ್ಯನಿರ್ವಹಿಸುತ್ತಿರುವ ಆರ್ ಓ ಪ್ಲಾಂಟ್ ಗಳನ್ನು ಕೂಡಲೇ ಮುಚ್ಚಿಸುವುದು ಸೇರಿದಂತೆ ಇನ್ನಿತರ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಮಾಜಿ ಮಂಡಲ ಅಧ್ಯಕ್ಷ ಜೆ ಸುಧಾರ್ಕ್, ಜಿಲ್ಲಾ ಭಾರತೀಯ ಜನತಾ ಪಾರ್ಟಿ ಉಪಾಧ್ಯಕ್ಷ ಶರಣಪ್ಪಗೌಡ ನಕ್ಕುಂದಿ , ಟಿಪಿಸಿಎಂಎಸ್ ಅಧ್ಯಕ್ಷ ಎಸ್.ತಿಮ್ಮಾರೆಡ್ಡಿ ಭೋಗಾವತಿ, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ದೊರೆಬಾಬು, ವಿಶ್ವನಾಥ್ ನಂದಿಹಾಳ, ಉಪಾಧ್ಯಕ್ಷರು ಬಿಜೆಪಿ ಮಾನ್ವಿ ಮಂಡಲ ಎಂ ಶ್ರೀನಿವಾಸ್, ಜಗದೀಶ್ ಓತೂರು, ಮಾಜಿ ಪ್ರಧಾನ ಕಾರ್ಯದರ್ಶಿಗಳು, ರವಿಕುಮಾರ ಸಾಹುಕಾರ ಯುವ ಮೋರ್ಚಾ ಅಧ್ಯಕ್ಷರು ಮಾನ್ವಿ ಮಂಡಲ, ರಾಮನಗೌಡ ಗವಿಗಟ್, ಜಿ ಉಮಾಪತಿನಾಯಕ, ಶಿವಕುಮಾರ ಕೋನಾಪುರಪೇಟೆ, ಶರಣಯ್ಯಸ್ವಾಮಿ, ಗೋಪಾಲ ಇಬ್ರಾಹಿಂಪುರ, ಕರೀಂಸಾಬ್, ಬಸವರಾಜ ಕರಡಿಗುಡ್ಡ, ಸೇರಿದಂತೆ ಅನೇಕ ಮುಖಂಡರು ಇದ್ದರು.

ಪೂರ್ಣಿಮಾ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನಲ್ಲಿ ವಿಶ್ವ ಮಲೇರಿಯಾ ರೋಗ ದಿನಾಚರಣೆ ಕಾರ್ಯಕ್ರಮ



ರಾಯಚೂರು.ಏ.29-

ನಗರದ ಪೂರ್ಣಿಮಾ ಆಯುರ್ವೇದ ಮೆಡಿಕಲ್ ಕಾಲೇಜ್ ನಲ್ಲಿ ವಿಶ್ವ ಮಲೇರಿಯಾ ದಿನಾಚರಣೆ ಸಸಿಗೆ ನೀರೆರೆಯುವದರ ಮೂಲಕ ಉದ್ಘಾಟಿಸಿ ಮಾನ್ಯ ತಾಲೂಕ ಆರೋಗ್ಯ ಅಧಿಕಾರಿಗಳು ಮಾತನಾಡಿದರು.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ರಾಯ ಚೂರು ಹಾಗೂ ಪೂರ್ಣಿಮಾ ಆಯುರ್ವೇದ ಮೆಡಿಕಲ್ ಕಾಲೇಜ್ ಸಹಯೋಗದೊಂದಿಗೆ ಶ್ರೀ ಚಂದ್ರಶೇಖರ್ ರಡ್ಡಿ ಕರಮುರಡಿ ಪ್ರಾಚಾ ರ್ಯರ ಅಧ್ಯಕ್ಷತೆಯಲ್ಲಿ ವಿಶ್ವ ಮಲೇರಿಯಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಂಡ ಪ್ರಯುಕ್ತ ಡಾ.ಅಮೃತ್ ತಾಲೂಕು ಆರೋಗ್ಯ ಅಧಿಕಾರಿಗಳು ಮಾತನಾಡುತ್ತಾ, ನಗರದ ಎಲ್ಲ ಪ್ರದೇಶಗಳಲ್ಲಿ ಮನೆಯ ಸುತ್ತಲಿನ ಜಾಗಗಳಲ್ಲಿ ಶಾಶ್ವತ ನೀರು ನಿಲ್ಲುವ ಸ್ಥಳಗಳಿದ್ದರೆ, ನೀರು ನಿಲ್ಲದಂತೆ ನಿಗಾ ವಹಿಸಲು ಜನತೆಗೆ ಜಾಗೃತಿ ನೀಡಲು ತಿಳಿಸಿದರು. ಮುಖ್ಯವಾಗಿ ಮಲೇರಿಯಾ ಹರಡುವ ಅನಾಪಿಲೀಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ಗುರ್ತಿಸುವುದು, ಕೀಟ ನಾಶಕ ಸಿಂಪರಣೆಗೆ ಸಾರ್ವಜನಿಕರ ಸಹಕಾರ ಅಗತ್ಯವಿದೆ ಎಂದು ತಿಳಿಸಿದರು.

ಮಲೇರಿಯಾ ಜ್ವರವು ಪ್ಲಾಸ್ಮೋಡಿಯಂ ಎಂಬ ಪರಾವಲಂಭಿ ಸೂಕ್ಷ್ಮಾಣುವಿನಿಂದ ಉಂಟಾಗಬಹುದಾಗಿದ್ದು, ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದ ಚಳಿ, ನಡುಕ, ಬಿಟ್ಟು ಬಿಟ್ಟು ಜ್ವರ ಬರುವುದು, ವಾಕರಿಕೆ, ಮೈ ಬೆವರುವುದು ಲಕ್ಷಣಗಳಾಗಿವೆ.

ಈ ಲಕ್ಷಣಗಳು ಕಂಡು ಬಂದಲ್ಲಿ ಮಲೇರಿಯಾ ಜ್ವರ ಇರಬಹುದು ಎಂದು ಭಾವಿಸಿ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ರಕ್ತ ಲೇಪನ ಪರೀಕ್ಷೆಗೆ ಒಳಪಟ್ಟು ಖಚಿತಪಟ್ಟಲ್ಲಿ ಸೂಕ್ತ ಉಚಿತ ಚಿಕಿತ್ಸೆ ಪಡೆದು ಗುಣ ಹೊಂದಬಹುದಾಗಿದೆ ಎಂದು ಹೇಳಿದರು.

ನಿಯಂತ್ರಣಕ್ಕೆ ಸಹಕಾರ ಅಲ್ಲದೆ ಮಲೇರಿಯಾ ಪ್ರಕರಣಗಳ ತಡೆಗೆ ಮನೆಯ ಒಳಭಾಗ ಆರೋಗ್ಯ ಇಲಾಖೆಯಿಂದ ಕೈಗೊಳ್ಳುವ ಕೀಟನಾಶಕ ಸಿಂಪರಣೆಗೆ ಸಾರ್ವಜನಿಕರು ಸಹಕರಿಸಬೇಕು. ಸ್ವಯಂ ರಕ್ಷಣಾ ಕ್ರಮಗಳಾದ ಮಲಗುವಾಗ ಸೊಳ್ಳೆ ಪರದೆ ಬಳಕೆ ಮಾಡಬೇಕು. ಕಿಟಕಿಗಳಿಗೆ ಸೊಳ್ಳೆಗಳು ನುಸುಳದಂತೆ ಜಾಲರಿ ಅಳವಡಿಸುವುದು. ಆರೋಗ್ಯ ಇಲಾಖೆಯಿಂದ ನೀಡಲ್ಪಡುವ ಲಾರ್ವಹಾರಿ ಗಪ್ಪಿ ಮತ್ತು ಗಂಬೂಷಿಯಾ ಮೀನುಗಳನ್ನು ಶಾಶ್ವತವಾಗಿ ನೀರು ನಿಲ್ಲುವ ಸ್ಥಳಗಳಲ್ಲಿ ಬಿಡಲು ಉಚಿತವಾಗಿ ಪಡೆಯಬಹುದಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ಜಿಲ್ಲಾ ಸಂಚಲಕರಾದ ಡಾ. ದಂಡಪ್ಪ ಬಿರಾದಾರ ಮಾತನಾಡುತ್ತಾ

ಸಾರ್ವಜನಿಕರು ಯಾವುದೇ ಜ್ವರವಿರಲಿ, ಮೊದಲು ರಕ್ತಲೇಪನ ಪರೀಕ್ಷೆ ಮಾಡಿಸಬೇಕು. ಇದರಿಂದ ಮಲೇರಿಯಾ ಸೇರಿದಂತೆ ಸೋಂಕಿತ ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ರೋಗಗಳ ನಿಯಂತ್ರಣಕ್ಕೆ ಸಾಧ್ಯವಾಗುವುದು ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ರಾದ ಚಂದ್ರಶೇಖರ್ ರೆಡ್ಡಿ ಕರಮುರಡಿ ಮಾತಾಡುತ್ತಾ. ಆರೋಗ್ಯ ಇಲಾಖೆಯವರು ನಮ್ಮ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗಾಗಿ ತಿಳಿಸುವುದಕ್ಕಾಗಿ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದು ನಿಜವಾಗಲೂ ಸಂತೋಷದ ಸಂಗತಿ. ಇಂಥ ಅಂಶಗಳನ್ನು ಪ್ರತಿಯೊಬ್ಬ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು ಈ ರೋಗದ ಲಕ್ಷಣಗಳೇನು ಈ ರೋಗ ಹೇಗೆ ಬರುತ್ತದೆ ಈ ಮಲೇರಿಯಾ ಹೇಗೆ ನಿಯಂತ್ರಣ ಮಾಡಬೇಕು ಎಂಬುದು ಈ ಕಾರ್ಯಕ್ರಮದಿಂದ ವಿದ್ಯಾರ್ಥಿಗಳಿಗೆ ತಿಳಿದುಕೊಳ್ಳಲು ಅನುಕೂಲವಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಬಿ.ಹೆಚ್.ಇ.ಓ ಸರೋಜಾ ಕೆ, ಎಮ್.ಟಿ.ಎಸ ಸಂಧ್ಯಾ ಕಾಲೇಜು ಸಿಬ್ಬಂದಿಯವರು, ಉಪಸ್ಥಿತರಿದ್ದರು.

ಪೊಲೀಸ್ ಸಿಬ್ಬಂದಿಗಳ ಕ್ಷೇಮಾಭಿವೃದ್ಧಿಗೆ ಸರ್ಕಾರ ಬದ್ದ: ಗೃಹ ಸಚಿವ ಡಾ.ಜಿ.ಪರಮೇಶ್ವರ್

ಕಲಬುರಗಿ,ಏ.29-

ನಾಡಿನಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ಹೊಂದಿರುವ ಪೊಲೀಸ್ ಸಿಬ್ಬಂದಿಗಳ ಕ್ಷೇಮಾಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದು ರಾಜ್ಯದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.

ಮಂಗಳವಾರ ಕಲಬುರಗಿ ನಗರದ ಸಿ.ಎ.ಆರ್. ಪೊಲೀಸ್ ಮೈದಾನದಲ್ಲಿ ಕಲಬುರಗಿ ನಗರ ಪೊಲೀಸ್ ಹಾಗೂ ಕಲಬುರಗಿ ಜಿಲ್ಲಾ ಪೊಲೀಸ್ ಮತ್ತು ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಸುಮಾರು 20.88 ಕೋಟಿ ವೆಚ್ಚದ 72 ಪೊಲೀಸ್ ವಸತಿ ಗೃಹಗಳನ್ನು ಲೋಕಾರ್ಪ ಣೆಗೊಳಿಸಿ ಅವರು ಮಾತನಾಡಿದರು.

ಕಲಬುರಗಿ ನಗರದಲ್ಲಿ 24 ಪೊಲೀಸ್ ವಸತಿ ಗೃಹ ಕಟ್ಟಡಗಳು, ಅಫಜಲಪುರ ಪಟ್ಟಣದಲ್ಲಿ 24, ದೇವಲ ಗಾಣಗಾಪುರದಲ್ಲಿ 12, ಆಳಂದ ಪಟ್ಟಣದಲ್ಲಿ 12 ಪೊಲೀಸ್ ವಸತಿ ಗೃಹ ಕಟ್ಟಡಗಳನ್ನು ಇಂದಿಲ್ಲಿ ಪೊಲೀಸ್ ಸಿಬ್ಬಂದಿಗೆ ಸಮರ್ಪಿಸಲಾಗಿದೆ ಎಂದರು.

ಬ್ರಿಟಿಷರ ಕಾಲದ ಹಳೆಯ ಪೊಲೀಸ್ ಲೈನ್' ಮನೆಗಳ ಬದಲಿಗೆ, ಆಧುನಿಕ ಸೌಲಭ್ಯವುಳ್ಳ ' ಪೊಲೀಸ್ ಗೃಹ' ಯೋಜನೆಯಡಿ ರಾಜ್ಯಾದ್ಯಂತ ಈಗಾಗಲೇ 40,712 ಮನೆಗಳನ್ನು ನಿರ್ಮಿಸಲಾಗಿದೆ. ಇನ್ನೂ 1,830 ಮನೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಪೊಲೀಸ್ ಸಿಬ್ಬಂದಿ ಮತ್ತು ಅವರ ಕುಟುಂಬದವರಿಗೆ ಉತ್ತಮ ಸೌಲಭ್ಯ ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ



ಎಂದರು.

ಸಂಚಾರಿ ನಿರ್ವಹಣೆ ಸೇರಿದಂತೆ ಇಲಾಖೆಯ ಕೆಲಸಗಳಲ್ಲಿ ಆಧುನಿಕ ತಂತ್ರಜ್ಞಾನ ಮತ್ತು ಮಾಡರ್ನ್ ಫೆಸಿಲಿಟಿಗಳನ್ನು ಅಳವಡಿಸಿಕೊಳ್ಳಲು ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಮಳೆ, ಬಿಸಿಲು ಎನ್ನದೆ ಹಗಲಿರುಳು ಶ್ರಮಿಸುವ ಪೊಲೀಸರು ಮತ್ತು ಅವರ ಕುಟುಂಬದ ಹಿತರಕ್ಷಣೆ ಸರ್ಕಾರದ ಜವಾಬ್ದಾರಿಯಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ಮತ್ತು ಪೋಷಕರಿಗೆ ನೆರವಾಗಲು ವಸತಿ ಸೌಕರ್ಯ ಅತ್ಯಗತ್ಯ ಎಂದರು.

ಪ್ರಸ್ತುತ ಇಲಾಖೆಯಲ್ಲಿ ಸುಮಾರು 15,000 ರಿಂದ 16,000 ಹುದ್ದೆಗಳು ಖಾಲಿ ಇವೆ. ಮೊದಲ ಹಂತದಲ್ಲಿ ಸುಮಾರು 8,000 ಹುದ್ದೆಗಳ ಭರ್ತಿಗೆ ಮುಂದಿನ 10 ದಿನಗಳಲ್ಲಿ ಅಧಿಕೃತ ಅಧಿಸೂಚನೆ ಹೊರಡಿಸಲಾಗುವುದು ಎಂದು ಗೃಹ ಸಚಿವರು ಇದೇ ಸಂದರ್ಭದಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ವೈದ್ಯಕೀಯ ಶಿಕ್ಷಣ, ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಮಾತನಾಡಿ, ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು ಪೊಲೀಸ್ ಇಲಾಖೆಯಲ್ಲಿ ತರುತ್ತಿರುವ ಅನೇಕ ಬದಲಾವಣೆ ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದ ಅವರು, ಇಡೀ ದೇಶದಲ್ಲೇ ಕರ್ನಾಟಕ ಪೊಲೀಸ್ ಇಲಾಖೆ ಉತ್ತಮ ಸ್ಥಾನದಲ್ಲಿರಲು ಅವರ ದೂರದೃಷ್ಟಿ ಮತ್ತು ನಿಸ್ವಾರ್ಥ ಸೇವೆ ಕಾರಣ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಮಾತನಾಡಿ ದಕ್ಷಿಣ ಕ್ಷೇತ್ರದ ಕೋಟನೂರ 'ಡಿ' ಪ್ರದೇಶದಲ್ಲಿ ರಾತ್ರಿ ವೇಳೆಯಲ್ಲಿ ಅಹಿತಕರ ಘಟನೆಗಳು ನಡೆಯುತ್ತಿದ್ದು, ಸಾರ್ವಜನಿಕರ ಹಿತದೃಷ್ಟಿಯಿಂದ ಇಲ್ಲಿ ಒಂದು ಪೊಲೀಸ್ ಸ್ಟೇಷನ್ ಸ್ಥಾಪಿಸಬೇಕು ಹಾಗೂ ಪಟ್ಟಣ ಗ್ರಾಮದಲ್ಲಿ ಒಂದು ಔಟ್‌ಪೋಸ್ಟ್ ಸ್ಟೇಷನ್ (ಪೊಲೀಸ್ ಹೊರಠಾಣೆ) ಸ್ಥಾಪಿಸಬೇಕೆಂದು ಸಚಿವರಲ್ಲಿ ಬೇಡಿಕೆ ಇಟ್ಟರು. ಶಾಸಕರ ಮನವಿಗೆ ಪೂರಕವಾಗಿ ಸ್ಪಂದಿಸಿದ ಗೃಹ ಸಚಿವರು, ಈಗಾಗಲೇ ವಿಧಾನಸಭೆಯಲ್ಲಿ ಈ ಬಗ್ಗೆ ಭರವಸೆ ನೀಡಿರುವುದನ್ನು ಸ್ಮರಿಸಿದರು. ಕ್ಷೇತ್ರದ ಜನರ ಬೇಡಿಕೆಗಳನ್ನು ಆದ್ಯತೆಯ ಮೇಲೆ ಈಡೇರಿಸುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರು ಹಾಗೂ ಆಳಂದ ಶಾಸಕ ಬಿ.ಆರ್. ಪಾಟೀಲ್, ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಕ್ಷೇತ್ರದ ಶಾಸಕಿ ಖನೀಜಾ ಫಾತಿಮಾ, ಅಫಜಲಪುರ ಶಾಸಕ ಎಂ.ವೈ. ಪಾಟೀಲ್, ವಿಧಾನ ಪರಿಷತ್ ಶಾಸಕರುಗಳಾದ ಜಗದೇವ್ ಗುತ್ತೇದಾರ್ ತಿಪ್ಪಣ್ಣಪ್ಪ ಕಮಕನೂರ್, ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಸೈಯದ್ ಮೊಹಮ್ಮದ್ ಚಿಸ್ತಿ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಮಜಹರ್ ಆಲಂ ಖಾನ್, ಕಲಬುರಗಿ ಮಹಾನಗರ ಪಾಲಿಕೆ ಮಹಾಪೌರರಾದ ವರ್ಷಾ ರಾಜೀವ ಜಾನೆ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಂದ್ರಿಕಾ ಪರಮೇಶ್ವರ್, ರಾಜ್ಯದ ಪೊಲೀಸ್ ಮಹಾನಿರ್ದೇಶಕರು ಮತ್ತು ಮಹಾ ನಿರೀಕ್ಷಕರು ಡಾ. ಎಂ.ಎಸ್. ಸಲೀಂ, ಈಶಾನ್ಯ ವಲಯದ ಡಿ.ಐ.ಜಿ ಶಾಂತನು ಸಿನ್ಹಾ, ಕಲಬುರಗಿ ಎಸ್.ಪಿ. ಅಡ್ಡೂರು ಶ್ರೀನಿವಾಸುಲು, ಬೀದರ್ ಎಸ್.ಪಿ. ಪ್ರದೀಪ್ ಗುಂಟಿ, ಯಾದಗಿರಿ ಎಸ್.ಪಿ. ಪೃಥ್ವಿಕ್ ಶಂಕರ್ ಸೇರಿದಂತೆ ಇಲಾಖೆಯ ಪ್ರಮುಖ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಸ್ವಾಗತಿಸಿದರು.

ಕುಡಿಯುವ ನೀರಿನ ಸಮಸ್ಯೆಗೆ ಸ್ಪಂದಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ

ಕೊಪ್ಪಳ ಏ.29-

ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರು ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಸಭೆಯನ್ನು ಜರುಗಿಸಿ, ಕುಡಿಯುವ ನೀರಿನ ಕೊರತೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಿದ್ದಾರೆ.

ಜಿಲ್ಲೆಯಲ್ಲಿ ಒಟ್ಟು 153 ಗ್ರಾಮ ಪಂಚಾಯತಿಗಳಿದ್ದು, 722 ಗ್ರಾಮಗಳಿರುತ್ತವೆ. ಈ ಗ್ರಾಮಗಳಲ್ಲಿ 418 ಗ್ರಾಮುಗಳಿಗೆ , ಯೋಜನೆ ಮುಖಾಂತರ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ 2,337 ಸರ್ಕಾರಿ ಮತ್ತು 5,551 ಖಾಸಗಿ ಬೋರ್‌ವೆಲ್‌ಗಳಿದ್ದು, ಇದರಲ್ಲಿ 720 ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಲಾಗಿರುತ್ತದೆ. 30 ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆ ಉಂಟಾಗಿದ್ದು, ಅಲ್ಲಿ 39 ಖಾಸಗಿ ಬೋರ್‌ವೆಲ್‌ಗಳ ಮಾಲೀಕರಿಂದ ಕರಾರು ಪತ್ರವನ್ನು ಮಾಡಿಸಿಕೊಂಡು ಕುಡಿಯುವ ನೀರು ಪೂರೈಸಲಾಗುತ್ತಿದೆ.

ಜಿಲ್ಲೆಯ ನಗರ ಪ್ರದೇಶದಲ್ಲಿ ಜೂನ್ ಮಾಹೆಯವರೆಗೆ ಕುಡಿಯುವ ನೀರಿನ ಸಮಸ್ಯೆ ಇರುವದಿಲ್ಲ ಮತ್ತು ನಗರ ಪ್ರದೇಶ ಮತ್ತು ಬೋರ್‌ವೆಲ್ ನಿಂದ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ನಗರ ಪ್ರದೇಶದಲ್ಲಿ ಒಟ್ಟು 845 ಬೋರ್‌ವೆಲ್‌ಗಳು ಇದ್ದು, ಅದರಲ್ಲಿ 762 ಬೋರ್‌ವೆಲ್‌ಗಳು ಚಾಲನೆಯಲ್ಲಿರುತ್ತವೆ.

ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಹಾಗೂ ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಮೂಲಗಳನ್ನು ಕಾಲಕಾಲಕ್ಕೆ ನಿಯಮಾನುಸಾರ ಪರೀಕ್ಷೆಗೊಳಪಡಿಸಿ ಶುದ್ದತೆಯನ್ನು ಖಚಿತಪಡಿಸಿಕೊಂಡು ಅಗತ್ಯ ಕ್ರಮವಹಿಸಲು ಸಂಬಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ. ಮುಂದುವರೆದು , , ಸಂಪು, ಹಾಗೂ ನೀರು ಸಂಗ್ರಾಹಕಗಳನ್ನು ಕಾಲಕಾಲಕ್ಕೆ ಸ್ವಚ್ಛಗೊಳಿಸಿ, ಶುದ್ಧೀಕರಿಸಲು ಮತ್ತು ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿರುವ ಚರಂಡಿ ಪಕ್ಕದಲ್ಲಿರುವ ಪೈಪ್‌ಲೈನ್‌ಗಳನ್ನು ಸ್ಥಳಾಂತರಿಸಲು ಸಂಬಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಮತ್ತು ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾದರೆ ಸಾರ್ವಜನಿಕರಿಗೆ ಅನುಕೂಲವಾಗುವಂತೆ ದೂರನ್ನು ಸಲ್ಲಿಸಲು ತಾಲೂಕು ಮತ್ತು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸಹಾಯವಾಣಿಯನ್ನು ತೆರೆಯಲಾಗಿರುತ್ತದೆ. ಇದುವರೆಗೂ ಗ್ರಾಮೀಣ ಪ್ರದೇಶದಲ್ಲಿ 71 ಮತ್ತು ನಗರ ಪ್ರದೇಶದಲ್ಲಿ 121 ದೂರುಗಳು ಸ್ವೀಕೃತವಾಗಿದ್ದು, ಆ ದೂರುಗಳನ್ನು ಬಗೆಹರಿಸಲಾಗಿದೆ. ಆ ದೂರುಗಳು ಪೈಪ್‌ಲೈನ್ ದುರಸ್ಥಿ, ಕುಡಿಯುವ ನೀರು ಒದಗಿಸಲು ಮತ್ತು ಮೋಟರ್ ದುರಸ್ಥಿಗೆ ಸಂಬಂಧಿಸಿರುತ್ತವೆ.

ಜಿಲ್ಲೆಯಲ್ಲಿ ಯಾವುದೇ ರೀತಿಯ ಕುಡಿಯುವ ನೀರಿನ ಮತ್ತು ಮೇವಿನ ಸಮಸ್ಯೆ ಉದ್ಭವಿಸಿದರೆ ತಕ್ಷಣ ಸ್ಪಂದಿಸಲು ತಹಶೀಲ್ದಾರ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ್ ಇವರಿಗೆ ನಿರ್ದೇಶನ ನೀಡಲಾಗಿದೆ. ಗ್ರಾಮುಮಟ್ಟದ ಮತ್ತು ತಾಲೂಕು ಮಟ್ಟದ ಟಾಸ್ಕ್‌ಫೋರ್ಸ್‌ನಲ್ಲಿ ಸಮಿತಿಯನ್ನು ರಚನೆ ಮಾಡಿಕೊಳ್ಳಲಾಗಿದೆ ಹಾಗೂ ಸದ್ಯಕ್ಕೆ ಜಿಲ್ಲೆಯಲ್ಲಿ ಅನುದಾನದ ಕೊರತೆ ಇರುವುದಿಲ್ಲ.

ಜಿಲ್ಲೆಯಲ್ಲಿ ಪ್ರತಿ ಮಂಗಳವಾರ ಮತ್ತು ಬುಧವಾರ ಗ್ರಾಮ ಮಟ್ಟದ ಕಾರ್ಯಪಡೆ ಮತ್ತು ಪ್ರತಿ ಗುರುವಾರ ತಾಲೂಕಾ ಮಟ್ಟದ ಕಾರ್ಯಪಡೆ ಮತ್ತು ತಾಲೂಕು ಮಟ್ಟದಲ್ಲಿ ಪ್ರತಿ ಶುಕ್ರವಾರ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಆಡಳಿತಾಧಿಕಾರಿಗಳು, ಪಶು ಸಖಿ, ಕೃಷಿ ಸಖಿ ಅಧಿಕಾರಿಗಳೊಂದಿಗೆ ಸಾಪ್ತಾಹಿಕ ಸಭೆಗಳನ್ನು ನಡೆಸಲು ನಿರ್ದೇಶನ ನೀಡಲಾಗಿದೆ ಮತ್ತು ಸಭೆಯ ನಡಾವಳಿಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗುತ್ತಿದೆ.

ಸಭೆಯಲ್ಲಿ ವಿಧಾನಸಭಾ ಕ್ಷೇತ್ರವಾರು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಯಿತು. ಕೊಪ್ಪಳ ವಿಧಾನಸಭಾ ಕ್ಷೇತ್ರಕ್ಕೆ ಉಪ ಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್ ಕೊಪ್ಪಳ, ಗಂಗಾವತಿ ವಿಧಾನಸಭಾ ಕ್ಷೇತ್ರಕ್ಕೆ ಜಂಟಿ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಕೊಪ್ಪಳ, ಕನಕಗಿರಿ ವಿಧಾನಸಭಾ ಕ್ಷೇತ್ರಕ್ಕೆ ಉಪವಿಭಾಗಾಧಿಕಾರಿಗಳು, ಕೊಪ್ಪಳ, ಕುಷ್ಟಗಿ ವಿಧಾನಸಭಾ ಕ್ಷೇತ್ರಕ್ಕೆ ಉಪ ನಿರ್ದೇಶಕರು ಸಾಮಾಜ ಕಲ್ಯಾಣಾಧಿಕಾರಿಗಳು ಮತ್ತು ಯಲಬುರ್ಗಾ ವಿಧಾನಸಭಾ ಕ್ಷೇತ್ರಕ್ಕೆ ಜಂಟಿ ಕೃಷಿ ನಿರ್ದೇಶಕರನ್ನು ನೇಮಕ ಮಾಡಲಾಗಿದೆ. ಸಾರ್ವಜನಿಕರಿಗೆ ಅನುಕೂಲವಾಗುವಂತೆ ಈ ಕೆಳಕಂಡ ತಾಲೂಕು ಮತ್ತು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸಹಾಯವಾಣಿಯನ್ನು ತೆರೆಯಲಾಗಿರುತ್ತದೆ. ಇದುವರೆಗೂ 192 ದೂರುಗಳು ಸ್ವೀಕೃತವಾಗಿದ್ದು, ಅದರಲ್ಲಿ 192 ದೂರುಗಳನ್ನು ಬಗೆಹರಿಸಲಾಗಿದೆ.

ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಎಲ್ಲ ಸಂಬಧಿತ ಕಚೇರಿಗಳಲ್ಲಿ ಸಹಾಯವಾಣಿಯನ್ನು ಸ್ಥಾಪಿಸಲಾಗಿದೆ. ಜಿಲ್ಲಾಧಿಕಾರಿಗಳ ಕಛೇರಿ ಕೊಪ್ಪಳ: 08539-221077, ಜಿಲ್ಲಾ ಪಂಚಾಯತ್, ಕೊಪ್ಪಳ: 08539-22107 7829658536, ತಾಲೂಕು ಪಂಚಾಯತ್, ಕೊಪ್ಪಳ: 9620410509, ತಾಲೂಕು ಪಂಚಾಯತ್‌ಗಳಾದ ಯಲಬುರ್ಗಾ: 9620414476, ಕುಷ್ಟಗಿ: 7899986581, ಕನಕಗಿರಿ: 80730511234, 90362205541, ಕುಕನೂರು: 8296920386, ಗಂಗಾವತಿ: 6361940327, 9036892963, ಕಾರಟಗಿ: 9845213245 ಸಂಖ್ಯೆಗಳಿಗೆ ಸಾರ್ವಜನಿಕರು ಕುಡಿಯುವ ನೀರಿಗೆ ಸಂಬಧಿಸಿದ ಯಾವುದೇ ದೂರುಗಳನ್ನು ಸಂಬಧಿಸಿದ ಸಹಾಯವಾಣಿಗೆ ಕರೆ ಮಾಡಿ ಸಲ್ಲಿಸಬಹುದು.

ಸ್ಥಳೀಯ ಸಂಸ್ಥೆಗಳಾದ ಕೊಪ್ಪಳ: 08539-230192, ಭಾಗನ್ಯಗರ: 9964662243, ಕುಕನೂರು: 8197396725, ಯಲಬುರ್ಗಾ: 8951282525, 9980454930, ಕುಷ್ಟಗಿ: 08536-267041 9742712646, ತಾವರಗೇರಾ: 9900572120, ಕಾರಟಗಿ: 9900972859 9449963320, ಕನಕಗಿರಿ: 8951133577, ಗಂಗಾವತಿ: 8050428081, ಹನುಮಸಾಗರ: 9980014431 ಸಂಖ್ಯೆಗಳಿಗೆ ಸಾರ್ವಜನಿಕರು ಕುಡಿಯುವ ನೀರಿಗೆ ಸಂಬಂಧಿಸಿದ ಯಾವುದೇ ದೂರುಗಳನ್ನು ಸಂಬಧಿಸಿದ ಸಹಾಯವಾಣಿಗೆ ಕರೆ ಮಾಡಿ ಸಲ್ಲಿಸಬಹುದು.

ಜಿಲ್ಲೆಯಲ್ಲಿ 885811 ಮೆಟ್ರಿಕ್ ಟನ್ ಮೇವು ಲಭ್ಯವಿದ್ದು, ಇನ್ನೂ 58 ವಾರಕ್ಕೆ ಸಾಕಾಗುವಷ್ಟು ಮೇವು ಲಭ್ಯವಿರುತ್ತದೆ. ಸದ್ಯಕ್ಕೆ ಮೇವಿನ ಸಮಸ್ಯೆ ಇರುವುದಿಲ್ಲ ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ: ಸರ್ಕಾರಿ ಐಟಿಐ ಕಾಲೇಜು ಪ್ರವೇಶಾತಿಗೆ ಅರ್ಜಿ ಆಹ್ವಾನ

ಬಳ್ಳಾರಿ,ಏ.29-

ನಗರದ ರೇಡಿಯೋ ಪಾರ್ಕ್ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಪ್ರಸಕ್ತ 2026-27 ನೇ ಸಾಲಿಗೆ ವಿವಿಧ ವೃತ್ತಿಗಳಿಗೆ ಪ್ರವೇಶಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯ ಪಂಡಿತಾರಾಧ್ಯ ಅವರು ತಿಳಿಸಿದ್ದಾರೆ.

10 ನೇ ತರಗತಿ ಪಾಸ್/ಫೇಲ್ ಆದ ಅಭ್ಯರ್ಥಿಗಳು ವೆಬ್ ಸೈಟ್ ವಿಳಾಸ .... ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಅಥವಾ ನೇರವಾಗಿ ಸಂಸ್ಥೆಗೆ ಭೇಟಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಮೇ 08 ಕೊನೆಯ ದಿನವಾಗಿದೆ. ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿದ ಸಂಸ್ಥೆಯಲ್ಲಿ ಮಾತ್ರ ದಾಖಲೆ ಪರಿಶೀಲನೆಗೆ ಕಡ್ಡಾಯವಾಗಿ ಹಾಜರಾಗಬೇಕು.

ಸೂಚನೆ: ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ನೀಡುವ ಮೊಬೈಲ್ ಸಂಖ್ಯೆ ಹಾಗೂ ಇ-ಮೇಲ್ ವಿಳಾಸವನ್ನು ಪ್ರವೇಶಾತಿ ಮತ್ತು ಪರೀಕ್ಷೆ ಮುಗಿಯುವವರೆಗೂ ಬದಲಾವಣೆ ಮಾಡುವಂತಿಲ್ಲ. ಹೆಚ್ಚಿನ ಮಾಹಿತಿಗಾಗಿ ಮೊ.9902351985 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇ 3 ರಂದು ಯುಜಿ ನೀಟ್ ಪರೀಕ್ಷೆ: ನಿಷೇಧಾಜ್ಞೆ ಜಾರಿ

ಕೊಪ್ಪಳ ಏ.29-

ಯುಜಿ ನೀಟ್ 2026 ಪರೀಕ್ಷೆಯು ಮೇ 3 ರಂದು ಮಧ್ಯಾಹ್ನ 2 ರಿಂದ ಸಂಜೆ 5 ಗಂಟೆಯವರೆಗೆ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲು 200 ಮೀಟರ್ ಆವರಣವನ್ನು ನಿರ್ಬಂಧಿತ ಪ್ರದೇಶ ಎಂದು ಘೋಷಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ.ಸುರೇಶ್. ಬಿ. ಇಟ್ನಾಳ್ ಅವರು ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯ ಕೊಪ್ಪಳ ತಾಲೂಕಿನ 9 ಹಾಗೂ ಕುಕುನೂರು ತಾಲೂಕಿನ 1 ಪರೀಕ್ಷಾ ಕೇಂದ್ರ ಸೇರಿದಂತೆ ಜಿಲ್ಲಾದ್ಯಂತ ಒಟ್ಟು 10 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಗಳನ್ನು ಸುಗಮ ಮತ್ತು ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಅಂತರದ ಪ್ರದೇಶದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163 ರನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ನಿಷೇಧಾಜ್ಞೆ ಆದೇಶದನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ., ಮೊಬೈಲ್, ಪೇಜ್, ಜರಾಕ್ಸ್, ಟೈಪಿಂಗ್ ವ'ುಂತಾದ'ವ'ುಗ'ಳ'ನ'್ನ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಹಾಗೂ ನಿಯೋಜಿತ ಶಿಕ್ಷಕರನ್ನು ಜಾಗೃತ ದಳದವರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೆ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

ಜಾನಪದ ಕಲಾ ಸೌರಭ ಕಾರ್ಯಕ್ರಮ



ಆಳಂದ,ಏ.29-

ಪಟ್ಟಣದ ರೇವಣಸಿದ್ದೇಶ್ವರ ಕಾಲೋನಿಯ ಶ್ರೀ ರೇವಣಸಿದ್ದೇಶ್ವರ ದೇವಸ್ಥಾನದಲ್ಲಿ ಶ್ರೀ ಬಸವೇಶ್ವರ ಜಾನಪದ ಕಲಾ ಸಂಘ, ಬಸವನ ಸಂಗೋಳಗಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಶ್ರಯದಲ್ಲಿ ಆಯೋಜಿಸಲಾದ ''ಜಾನಪದ ಕಲಾ ಸೌರಭ'' ಕಾರ್ಯಕ್ರಮವು ಬೇಸಿಗೆಯ ತೀವ್ರ ಬಿಸಿಯ ನಡುವೆಯೇ ಜನರಿಗೆ ಮನತಂಪು ನೀಡಿದ ಸಾಂಸ್ಕೃತಿಕ ಹಬ್ಬವಾಗಿ ಮೂಡಿಬಂದಿತು.

ಕಾರ್ಯಕ್ರಮವನ್ನು ಸಂಗೀತ ಹಾಗೂ ಕಲಾ ಪ್ರೇಮಿ ಭೂಮಿಕಾ ಎಂ. ಪಾಟೀಲ ಅವರು ತಮ್ಮ ಹಾಡಿನ ಮೂಲಕ ಜ್ಯೋತಿ ಬೆಳಗಿಸಿ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಇಂತಹ ಕಾರ್ಯಕ್ರಮಗಳು ಜನಮನಕ್ಕೆ ಶಾಂತಿ ನೀಡುವುದರ ಜೊತೆಗೆ ನಮ್ಮ ಸಂಸ್ಕೃತಿ, ಪರಂಪರೆ ಮತ್ತು ಇತಿಹಾಸವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಮಹತ್ವದ ಪಾತ್ರವಹಿಸುತ್ತವೆ ಎಂದರು.

ನಿವೃತ್ತ ಕೃಷಿ ಅಧಿಕಾರಿ ಷಣ್ಮುಖಯ್ಯಾ ಸ್ವಾಮಿ ಅವರು ಜಾನಪದ ಕಲೆಯ ಉಳಿವು ಮತ್ತು ಬೆಳವಣಿಗೆಗೆ ಸಮಾಜದ ಎಲ್ಲ ವಲಯದವರು ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ದೇವಸ್ಥಾನ ಸಮಿತಿ ಅಧ್ಯಕ್ಷ ವಿಶ್ವನಾಥ ನಿಪ್ಪಾಣಿ ವಹಿಸಿದ್ದರು. ಸಿದ್ರಾಮಯ್ಯಾ ಖಂಡಾಳ ಸ್ವಾಮಿ ಅವರು ಸಾನ್ನಿಧ್ಯ ವಹಿಸಿದ್ದರು.

ವೇದಿಕೆಯಲ್ಲಿ ಸಂಗಮ್ಮ ಪ್ರಭುಲಿಂಗ ಪಾಟೀಲ, ಕಾಶಿನಾಥ ಸಲಗರ, ಶರಣಪ್ಪ ಸಂಜುವಾಡ ಸಾವಳೇಶ್ವರ, ಬಸವರಾಜ ಹತ್ತೆ ಕಿಣ್ಣಿಸುಲ್ತಾನ, ಧೂಳಯ್ಯಾ ಸ್ವಾಮಿ, ಗುರುಪಾದಯ್ಯಾ ಎಂ. ಹಿರೇಮಠ, ಶಿವಶರಣಯ್ಯಾಡಿ ಮಠ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ದಾಕ್ಷಯಿಣಿ ಚ. ಹಿರೇಮಠ ಪ್ರಾರ್ಥನೆ ಹಾಡಿದರು. ಬಳಿಕ ವಿವಿಧ ಕಲಾವಿದರು ಹಿಂದೂಸ್ತಾನಿ ಸಂಗೀತ, ತತ್ವಪದ, ವಚನ ಗಾಯನ, ಭಾವಗೀತೆ, ಭಕ್ತಿ ಗೀತೆ, ದಾಸವಾಣಿ ಹಾಗೂ ಜಾನಪದ ಗೀತೆಗಳನ್ನು ಪ್ರಸ್ತುತಪಡಿಸಿ ಪ್ರೇಕ್ಷಕರನ್ನು ಮನರಂಜಿಸಿದರು. ತಬಲಾ ವಾದನವನ್ನು ಬಾಲ್ಕಿ ಧರ್ಮರಾಜ ಕಟ್ಟಿಮನಿ ಮತ್ತು ಕಣ್ಣೂರ ವಿಜಯಕುಮಾರ ಪಾಂಚಾಳ ನೆರವೇರಿಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಮೊದಲ ಲಿಂಗತ್ವ ಅಲ್ಪಸಂಖ್ಯಾತ ಕ್ರಿಕೆಟ್ ಅಂಪೈರ್ ರಿತಿಕಾ ಶ್ರೀ

ಲಿಂಗಭೇದ ಮತ್ತು ಸಮಾಜದ ತಾರತಮ್ಯಗಳನ್ನು ದಿಟ್ಟತನದಿಂದ ಮೆಟ್ಟಿ ನಿಂತು, ತಮಿಳುನಾಡಿನ ಮೊಟ್ಟಮೊದಲ ಲಿಂಗತ್ವ ಅಲ್ಪಸಂಖ್ಯಾತ ಕ್ರಿಕೆಟ್ ಅಂಪೈರ್ ಆಗಿ ರಿತಿಕಾ ಶ್ರೀ ಕ್ರೀಡಾ ಲೋಕದಲ್ಲಿ ಇತಿಹಾಸ ನಿರ್ಮಿಸಿದ್ದಾರೆ

ಕ್ರೀಡಾಕ್ಷೇತ್ರದಲ್ಲಿ ಸಾಧನೆ ಮಾಡಲು ಲಿಂಗಭೇದ ಅಡ್ಡಿಯಾಗದು ಎಂಬುದನ್ನು ತಮಿಳುನಾಡಿನ ರಿತಿಕಾ ಶ್ರೀ ಸಾಬೀತುಪಡಿಸಿದ್ದಾರೆ. ತಮಿಳುನಾಡಿನ ಮೊಟ್ಟಮೊದಲ ಲಿಂಗತ್ವ ಅಲ್ಪಸಂಖ್ಯಾತ () ಕ್ರಿಕೆಟ್ ಅಂಪೈರ್ ಆಗಿ ಹೊರಹೊಮ್ಮಿದ್ದಾರೆ.

ಮೂಲತಃ ಸೇಲಂ ಜಿಲ್ಲೆಯವರಾದ ರಿತಿಕಾ ಶ್ರೀ ಅವರು ಹುಟ್ಟಿನಿಂದ ಆರ್. ಮುತ್ತುರಾಜ್ ಆಗಿದ್ದರು. ಮೆಕ್ಯಾನಿಕಲ್ ಎಂಜಿನಿಯರಿಂಗ್ ಡಿಪ್ಲೊಮಾ ಪೂರ್ಣಗೊಳಿಸಿದ್ದ ಇವರು, ಪಂಜಾಬ್‌ನ ಮೊಹಾಲಿಯ ಕಾಲ್ ಸೆಂಟರ್ ಒಂದರಲ್ಲಿ ಉದ್ಯೋಗದಲ್ಲಿದ್ದರು. ಬಿಡುವಿನ ವೇಳೆಯಲ್ಲಿ ಐಪಿಎಲ್ ಪಂದ್ಯಗಳನ್ನು ವೀಕ್ಷಿಸುತ್ತಿದ್ದಾಗ, ಅವರಿಗೆ ಅಂಪೈರ್ ವೃತ್ತಿಯ ಬಗ್ಗೆ ತೀವ್ರ ಆಕರ್ಷಣೆ ಉಂಟಾಯಿತು. 2020ರ ಕೋವಿಡ್-19 ಲಾಕ್‌ಡೌನ್ ಸಮಯದಲ್ಲಿ ತಮ್ಮ ಕೆಲಸವನ್ನು ಕಳೆದುಕೊಂಡ ಅವರು, ಮತ್ತೆ ತಮ್ಮ ತವರೂರಾದ ಸೇಲಂಗೆ ಮರಳಿದರು. ಈ ಬಿಕ್ಕಟ್ಟಿನ ಸಮಯವೇ ಅವರ ಅಂಪೈರಿಂಗ್ ಕನಸಿಗೆ ನಿಜವಾದ ಅಡಿಪಾಯ ಹಾಕಿತು.



ಬಿಜೆಪಿ ಮತ್ತು ತೃಣಮೂಲ ಕಾಂಗ್ರೆಸ್ ನಡುವಿನ ರಾಜಕೀಯ ಸಂಘರ್ಷಕ್ಕೆ ಪಶ್ಚಿಮ ಬಂಗಾಳದ ಭೂಮಿ ಯಾವಾಗಲೂ ಸಾಕ್ಷಿಯಾಗುತ್ತಲೇ ಇರುತ್ತದೆ. ಈ ಬಾರಿ ಚುನಾವಣಾ ಕಣದಲ್ಲಿ ಅಥವಾ ಪ್ರಚಾರದ ನಡುವೆ ನಡೆದ ಒಂದು ಘಟನೆ ರಾಷ್ಟ್ರಮಟ್ಟದಲ್ಲಿ...

ವಿಶ್ವವಿಖ್ಯಾತ ನಿರ್ದೇಶಕ ಆಂದ್ರೆ ಟಾರ್ಕೋವ್‌ಸ್ಕಿ ತಮ್ಮ ಚಿತ್ರಗಳಲ್ಲಿ ಶಬ್ದವನ್ನು ಕೇವಲ ತಾಂತ್ರಿಕ ಅಂಶವಾಗಿ ಬಳಸದೆ, ಅದನ್ನೊಂದು ಪ್ರಬಲ ಸೃಜನಶೀಲ ಮಾಧ್ಯಮವನ್ನಾಗಿ ರೂಪಾಂತರಿಸಿದವರು. ಅವರು ನಮಗೆ ಸಿನಿಮಾವನ್ನು ಕೇವಲ ಒಂದು ಕಥೆಯಾಗಿ ಹೇಳಲಿಲ್ಲ; ಬದಲಾಗಿ...

ವೃತ್ತಿಪರ ಅಂಪೈರ್ ಆಗಬೇಕೆಂಬ ಛಲದಿಂದ ಅವರು ಸಾಮಾಜಿಕ ಜಾಲತಾಣದ ಮೂಲಕ ಸೇಲಂ ಜಿಲ್ಲಾ ಕ್ರಿಕೆಟ್ ಸಂಸ್ಥೆಯನ್ನು () ಸಂಪರ್ಕಿಸಿದರು. ಅಂಪೈರ್ ಸಮಿತಿ ಅಧ್ಯಕ್ಷರಾದ ಯು. ಜಯರಾಮನ್ ಅವರು ರಿತಿಕಾಗೆ ಮಾರ್ಗದರ್ಶನ ನೀಡಿದರು. ಜೊತೆಗೆ ಹಿರಿಯ ಅಂಪೈರ್‌ಗಳಾದ ಆರ್. ಪಾರ್ಥಸಾರಥಿ ಮತ್ತು ವಿ. ಶಾಂತಿ ಭೂಷಣ್ ಅವರಿಂದ ಅಂಪೈರಿಂಗ್‌ನ ಸೂಕ್ಷ್ಮಗಳನ್ನು ಕಲಿತರು. 2021ರಿಂದಲೇ ಸೇಲಂ ಮತ್ತು ನಾಮಕ್ಕಲ್ ಕ್ರಿಕೆಟ್ ವಲಯದಲ್ಲಿ ಅವರು ಬರೋಬ್ಬರಿ 300ಕ್ಕೂ ಹೆಚ್ಚು ಪಂದ್ಯಗಳಲ್ಲಿ ಅಂಪೈರ್ ಆಗಿ ಯಶಸ್ವಿಯಾಗಿ ಕಾರ್ಯನಿರ್ವಹಿಸಿದ್ದಾರೆ.

ತಮ್ಮ ಅಂಪೈರ್ ವೃತ್ತಿಯಲ್ಲಿ ಸ್ವಲ್ಪ ಮಟ್ಟಿನ ಸ್ಥಿರತೆ ಕಂಡುಕೊಂಡ ನಂತರ, 2024ರಲ್ಲಿ ರಿತಿಕಾ ಅವರು ಲಿಂಗ ಪರಿವರ್ತನೆಗೆ ( ) ಒಳಗಾದರು. ಈ ನಿರ್ಧಾರಕ್ಕೆ ಜಯರಾಮನ್ ದಂಪತಿ ಸಂಪೂರ್ಣ ಬೆಂಬಲ ನೀಡಿದರು. ಆದರೆ, ಲಿಂಗ ಪರಿವರ್ತನೆಯ ನಂತರ ಅವರು ಸಮಾಜದಿಂದ ಕೆಲವು ಸವಾಲುಗಳನ್ನು ಎದುರಿಸಬೇಕಾಯಿತು. ಒಮ್ಮೆ ಕೊಯಮತ್ತೂರಿನ ಪ್ರಮುಖ ಶಿಕ್ಷಣ ಸಂಸ್ಥೆಯೊಂದರಲ್ಲಿ ನಡೆಯುತ್ತಿದ್ದ ಕ್ರಿಕೆಟ್ ಪಂದ್ಯಕ್ಕೆ ಅಂಪೈರ್ ಆಗಿ ತೆರಳಿದ್ದಾಗ, ಅಲ್ಲಿನ ಭದ್ರತಾ ಸಿಬ್ಬಂದಿ ಅವರನ್ನು ಒಳಗೆ ಬಿಡದೆ ತಡೆದು ಹಿಂದಕ್ಕೆ ಕಳುಹಿಸಿದ ಘಟನೆಯೂ ನಡೆಯಿತು. ಇಂತಹ ತಾರತಮ್ಯದ ನಡುವೆಯೂ ಕೊಯಮತ್ತೂರು ಜಿಲ್ಲಾ ಕ್ರಿಕೆಟ್ ಸಂಸ್ಥೆ () ಅವರಿಗೆ ಭದ್ರತೆ ಒದಗಿಸಿ, ಬೆಂಬಲವಾಗಿ ನಿಂತಿತು. ತಮ್ಮ ವೃತ್ತಿಯನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲು, ತಮಿಳುನಾಡು ಕ್ರಿಕೆಟ್ ಸಂಸ್ಥೆ () ನಡೆಸುವ ಸ್ಟೇಟ್ ಪ್ಯಾನಲ್ ಅಂಪೈರ್ ಪರೀಕ್ಷೆ ಬರೆಯಲು ರಿತಿಕಾ ಮುಂದಾದರು. ಆರಂಭದಲ್ಲಿ ಅವರನ್ನು ಮಹಿಳಾ ವಿಭಾಗದಲ್ಲಿ ಪರೀಕ್ಷೆ ಬರೆಯಲು ಸೂಚಿಸಲಾಗಿತ್ತು. ಆದರೆ, ಇದು ಸರಿಯಾದ ಕ್ರಮವಲ್ಲ ಎಂದು ಗಮನಕ್ಕೆ ತಂದಾಗ, ಸಂಸ್ಥೆಯು ತಕ್ಷಣವೇ ತನ್ನ ಅರ್ಜಿ ನಮೂನೆಯನ್ನು ಬದಲಾಯಿಸಿ ತೃತೀಯ ಲಿಂಗಿ ( ) ಎಂಬ ಹೊಸ ಆಯ್ಕೆಯನ್ನು ಅಧಿಕೃತವಾಗಿ ಸೇರ್ಪಡೆ ಮಾಡಿತು. ಈ ಸಾಂಸ್ಥಿಕ ಬದಲಾವಣೆಯು ರಿತಿಕಾ ಅವರ ಹೋರಾಟಕ್ಕೆ ಸಿಕ್ಕ ಅತಿದೊಡ್ಡ ವಿಜಯವಾಗಿದೆ.

''ಮೈದಾನದಲ್ಲಿ ಆಟಗಾರರಿಂದ ನನಗೆ ಎಂದಿಗೂ ಅಗೌರವ ಎದುರಾಗಿಲ್ಲ. ಸಮಾಜದ ದೃಷ್ಟಿಕೋನ ಸಂಪೂರ್ಣವಾಗಿ ಬದಲಾಗುತ್ತದೆ ಎಂಬ ಭ್ರಮೆ ನನಗಿಲ್ಲ, ಆದರೆ ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಯೊಬ್ಬರು ಯಾವ ಕ್ಷೇತ್ರದಲ್ಲಾದರೂ ಶ್ರದ್ಧೆಯಿಂದ ಸಾಧನೆ ಮಾಡಬಹುದು ಎಂಬುದನ್ನು ನಾನು ಸಾಬೀತುಪಡಿಸಲು ಬಯಸುತ್ತೇನೆ'' ಎಂದು ರಿತಿಕಾ ಶ್ರೀ ಹೇಳುತ್ತಾರೆ. ತಮ್ಮ ಆತ್ಮವಿಶ್ವಾಸ ಮತ್ತು ಪರಿಶ್ರಮದ ಮೂಲಕ ಕ್ರಿಕೆಟ್ ಮೈದಾನದಲ್ಲಿ ಸಮಾನತೆಯ ಹೊಸ ಭರವಸೆಯನ್ನು ಮೂಡಿಸಿರುವ ರಿತಿಕಾ ಶ್ರೀ ಅವರ ಸಾಧನೆ, ಕ್ರೀಡಾ ಲೋಕಕ್ಕೆ ಮಾತ್ರವಲ್ಲದೆ ಇಡೀ ಸಮಾಜಕ್ಕೆ ಒಂದು ಸ್ಫೂರ್ತಿದಾಯಕ ಉದಾಹರಣೆಯಾಗಿದೆ.

ನಿನ್ನ ಬಾಸ್ ಅಮಿತ್ ಶಾ ಆಟ ನಡೆಯಲ್ಲ; ಐಎಎಸ್ ಅಧಿಕಾರಿಗೆ ಚಾಟಿ ಬೀಸಿದ ಮಹುವಾ

ಬಿಜೆಪಿ ಮತ್ತು ತೃಣಮೂಲ ಕಾಂಗ್ರೆಸ್ ನಡುವಿನ ರಾಜಕೀಯ ಸಂಘರ್ಷಕ್ಕೆ ಪಶ್ಚಿಮ ಬಂಗಾಳದ ಭೂಮಿ ಯಾವಾಗಲೂ ಸಾಕ್ಷಿಯಾಗುತ್ತಲೇ ಇರುತ್ತದೆ. ಈ ಬಾರಿ ಚುನಾವಣಾ ಕಣದಲ್ಲಿ ಅಥವಾ ಪ್ರಚಾರದ ನಡುವೆ ನಡೆದ ಒಂದು ಘಟನೆ ರಾಷ್ಟ್ರಮಟ್ಟದಲ್ಲಿ ಭಾರಿ ಸದ್ದು ಮಾಡಿದೆ. ಅದುವೇ ಕೃಷ್ಣನಗರ ಲೋಕಸಭಾ ಕ್ಷೇತ್ರದ ಟಿಎಂಸಿ ಅಭ್ಯರ್ಥಿ ಮಹುವಾ ಮೋಯಿತ್ರಾ ಅವರು ಚುನಾವಣಾ ವೀಕ್ಷಕರಾಗಿ ಬಂದಿದ್ದ ಐಪಿಎಸ್ ಅಧಿಕಾರಿ ಬಟ್ಟುಲ ಗಂಗಾಧರ್ ಅವರಿಗೆ ಬಹಿರಂಗವಾಗಿ ''ಕ್ಲಾಸ್'' ತೆಗೆದುಕೊಂಡ ಪ್ರಸಂಗ.

ಪಶ್ಚಿಮ ಬಂಗಾಳದಲ್ಲಿ ಚುನಾವಣೆ ಎಂದರೆ ಅಲ್ಲಿ ಕೇಂದ್ರ ಪಡೆಗಳ ನಿಯೋಜನೆ ಮತ್ತು ಕೇಂದ್ರ ಚುನಾವಣಾ ಆಯೋಗದಿಂದ ನೇಮಕಗೊಂಡ ವೀಕ್ಷಕರ ಪಾತ್ರ ಬಹಳ ಮುಖ್ಯವಾಗಿರುತ್ತದೆ. ಒಡಿಶಾ ಕೇಡರ್‌ನ 2011ರ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾದ ಬಟ್ಟುಲ ಗಂಗಾಧರ್ ಅವರನ್ನು ನಾಡಿಯಾ ಜಿಲ್ಲೆಯ ಪೊಲೀಸ್ ವೀಕ್ಷಕರನ್ನಾಗಿ ( ) ಚುನಾವಣಾ ಆಯೋಗ ನೇಮಿಸಿತ್ತು. ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದಾಗ, ಅಭ್ಯರ್ಥಿಗಳ ಚಟುವಟಿಕೆಗಳ ಮೇಲೆ ಕಣ್ಣಿಡುವುದು ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವುದು ಇವರ ಜವಾಬ್ದಾರಿಯಾಗಿತ್ತು.

ಮಹುವಾ ಮೋಯಿತ್ರಾ ಆಕ್ರೋಶಕ್ಕೆ ಕಾರಣವೇನು?

ವೈರಲ್ ಆಗಿರುವ ವಿಡಿಯೋದಲ್ಲಿ ಕಂಡುಬರುವಂತೆ, ಮಹುವಾ ಮೋಯಿತ್ರಾ ಅವರು ಬಟ್ಟುಲ ಗಂಗಾಧರ್ ಅವರ ಮೇಲೆ ತೀವ್ರವಾಗಿ ವಾಗ್ದಾಳಿ ನಡೆಸಿದ್ದಾರೆ. ಇದಕ್ಕೆ ಮುಖ್ಯ ಕಾರಣವೆಂದರೆ, ಮಹುವಾ ಮೋಯಿತ್ರಾ ಅವರ ತಂಗಿಯ ಮನೆಯಲ್ಲಿ ಪೊಲೀಸರು ನಡೆಸಿದ ತಪಾಸಣೆ ಅಥವಾ ಅವರ ಬೆಂಬಲಿಗರನ್ನು ಗುರಿಯಾಗಿಸಿಕೊಂಡು ನಡೆಸಿದ ಕಾರ್ಯಾಚರಣೆ ಎನ್ನಲಾಗಿದೆ. ಚುನಾವಣಾ ಸಮಯದಲ್ಲಿ ಕೇಂದ್ರದ ಏಜೆನ್ಸಿ ಗಳು ಅಥವಾ ವೀಕ್ಷಕರು ಕೇವಲ ಪ್ರತಿಪಕ್ಷದವರನ್ನು (ಅಂದರೆ ಬಂಗಾಳದಲ್ಲಿ ಟಿಎಂಸಿ) ಗುರಿಯಾಗಿಸಿಕೊಂಡು ಕೆಲಸ ಮಾಡುತ್ತಿದ್ದಾರೆ ಎಂಬುದು ಮಹುವಾ ಅವರ ಪ್ರಬಲ ಆರೋಪವಾಗಿತ್ತು.

ಮಹುವಾ ಮೋಯಿತ್ರಾ ಅವರು ಐಪಿಎಸ್ ಅಧಿಕಾರಿಗೆ ಅತ್ಯಂತ ಕಠಿಣ ಶಬ್ದಗಳನ್ನ ಬಳಸಿ ತುಂಬಾ ನಾಜೂಕಾಗಿ ಕ್ಲಾಸ್ ತೆಗೆದುಕೊಂಡಿದ್ದಾರೆ. ಅವರ ಮಾತಿನ ಸಾರಾಂಶ ಹೀಗಿತ್ತು.

: ''ನೀವು ಇಲ್ಲಿಗೆ ಬಂದಿರುವುದು ಚುನಾವಣಾ ಆಯೋಗದ ಪರವಾಗಿ ಕೆಲಸ ಮಾಡಲು ಹೊರತು, ಬಿಜೆಪಿ ಅಥವಾ ಅಮಿತ್ ಶಾ ಅವರ ಏಜೆಂಟ್ ಆಗಿ ಅಲ್ಲ'' ಎಂದು ಮಹುವಾ ನೇರವಾಗಿ ಗುಡುಗಿದರು.''ನಿಮ್ಮ ಬಾಸ್ ಅಮಿತ್ ಶಾ ಅವರ ಆಟ ಇಲ್ಲಿ ನಡೆಯುವುದಿಲ್ಲ. ಇದು ಬಂಗಾಳ, ಇಲ್ಲಿನ



ಜನರು ಇಂತಹ ಬೆದರಿಕೆಗಳಿಗೆ ಸೊಪ್ಪು ಹಾಕುವುದಿಲ್ಲ'' ಎಂದು ಅವರು ಐಪಿಎಸ್ ಅಧಿಕಾರಿಗೆ ಎಚ್ಚರಿಕೆ ನೀಡಿದರು. ವೀಕ್ಷಕರು ತಮ್ಮ ಮಿತಿಯನ್ನು ಮೀರಿ ಕೆಲಸ ಮಾಡುತ್ತಿದ್ದಾರೆ ಮತ್ತು ಕೇವಲ ಒಂದು ರಾಜಕೀಯ ಪಕ್ಷಕ್ಕೆ ಅನುಕೂಲವಾಗುವಂತೆ ವರ್ತಿಸುತ್ತಿದ್ದಾರೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಒಬ್ಬ ಅಭ್ಯರ್ಥಿಯಾಗಿ ತನಗೆ ಸಿಗಬೇಕಾದ ಗೌರವ ಮತ್ತು ತನ್ನ ಬೆಂಬಲಿಗರಿಗೆ ನೀಡುತ್ತಿರುವ ಕಿರುಕುಳವನ್ನು ನಿಲ್ಲಿಸುವಂತೆ ಅವರು ತಾಕೀತು ಮಾಡಿದರು.

ಬಟ್ಟುಲ ಗಂಗಾಧರ್ ಅವರ ತಪ್ಪು ಏನಿತ್ತು?

ಮಹುವಾ ಮೋಯಿತ್ರಾ ಹೇಳೋ ಪ್ರಕಾರ, ಐಪಿಎಸ್ ಅಧಿಕಾರಿ ಬಟ್ಟುಲ ಗಂಗಾಧರ್ ಅವರು ತಟಸ್ಥವಾಗಿ ಕೆಲಸ ಮಾಡುವಲ್ಲಿ ವಿಫಲರಾಗಿದ್ದರು. ಯಾವುದೇ ಅಧಿಕೃತ ದೂರು ಅಥವಾ ಬಲವಾದ ಸಾಕ್ಷ್ಯಾಧಾರಗಳಿಲ್ಲದೆ ಟಿಎಂಸಿ ಕಾರ್ಯಕರ್ತರ ಮೇಲೆ ಒತ್ತಡ ಹೇರುವುದು, ಅವರನ್ನು ವಿಚಾರಣೆಗೆ ಒಳಪಡಿಸುವುದು ಅಥವಾ ಅವರ ಚಟುವಟಿಕೆಗಳಿಗೆ ಅಡ್ಡಿಪಡಿಸುವುದು ಅಧಿಕಾರಿಯ ಕಡೆಯಿಂದ ನಡೆದ ''ತಪ್ಪು'' ಎಂದು ಮಹುವಾ ಹೇಳಿದ್ದಾರೆ. ಅಧಿಕಾರಿಗಳು ಕೇಂದ್ರ ಸರ್ಕಾರದ ಕೈಗೊಂಬೆಗಳಂತೆ ವರ್ತಿಸುತ್ತಿದ್ದಾರೆ ಎಂಬುದು ಅವರ ಮುಖ್ಯ ಆಕ್ಷೇಪ.

ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಕಾಡ್ಗಿಚ್ಚಿನಂತೆ ಹರಡಿದೆ. ಜನರು ಮಹುವಾ ಮೋಯಿತ್ರಾ ಅವರ ಧೈರ್ಯವನ್ನು ಮೆಚ್ಚಿಕೊಂಡಿದ್ದಾರೆ. ಸರ್ಕಾರಿ ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಮಣಿಯಬಾರದು ಎಂಬ ಚರ್ಚೆಯೂ ಶುರುವಾಗಿದೆ. ಚುನಾವಣಾ ವೀಕ್ಷಕರೇ ಪಕ್ಷಪಾತಿಯಾಗಿ ನಡೆದುಕೊಂಡರೆ ಚುನಾವಣೆಯ ಪಾರದರ್ಶಕತೆ ಎಲ್ಲಿರುತ್ತದೆ ಎಂಬ ಪ್ರಶ್ನೆ ಮೂಡುತ್ತದೆ.

ಇನ್ನು ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಮತ್ತು ಟಿಎಂಸಿ ನಡುವಿನ ಜಿದ್ದಾಜಿದ್ದಿ ಎಷ್ಟು ಉಗ್ರವಾಗಿದೆ ಎಂಬುದಕ್ಕೆ ಈ ಘಟನೆ ಒಂದು ಕೈಗನ್ನಡಿಯಾಗಿದೆ. ಮಹುವಾ ಮೋಯಿತ್ರಾ ಅವರು ಯಾವಾಗಲೂ ತಮ್ಮ ನೇರ ನುಡಿ ಮತ್ತು ಆಕ್ರಮಣಕಾರಿ ಶೈಲಿಗೆ ಹೆಸರಾದವರು. ಈಗಲೂ ಅವರು ಅದನ್ನು ಮುಂದುವರಿಸಿದ್ದಾರೆ. ಒಟ್ಟಾರೆಯಾಗಿ ಹೇಳುವುದಾದರೆ, ಬಟ್ಟುಲ ಗಂಗಾಧರ್ ಮತ್ತು ಮಹುವಾ ಮೋಯಿತ್ರಾ ನಡುವಿನ ಈ ಸಂಘರ್ಷವು ಕೇವಲ ವ್ಯಕ್ತಿಗತ ಸಂಘರ್ಷವಾಗಿರಲಿಲ್ಲ. ಅದು ಕೇಂದ್ರದ ಅಧಿಕಾರ ಮತ್ತು ರಾಜ್ಯದ ಪ್ರಾದೇಶಿಕ ಅಸ್ಮಿತೆಯ ನಡುವಿನ ಹೋರಾಟವಾಗಿ ಕಂಡುಬಂತು. ಅಧಿಕಾರಿಯೊಬ್ಬರು ಸಂವಿಧಾನಬದ್ಧವಾಗಿ ನಡೆದುಕೊಳ್ಳಬೇಕಾದ ಅನಿವಾರ್ಯತೆ ಮತ್ತು ರಾಜಕಾರಣಿಗಳು ಸಾಂವಿಧಾನಿಕ ಚೌಕಟ್ಟಿನಲ್ಲಿ ಪ್ರತಿಭಟಿಸಬೇಕಾದ ಅಗತ್ಯವನ್ನು ಈ ಘಟನೆ ನೆನಪಿಸುತ್ತದೆ. ಮಹುವಾ ಅವರ ''ಅಮಿತ್ ಶಾ ಆಟ ನಡೆಯಲ್ಲ'' ಎಂಬ ಹೇಳಿಕೆಯು, ಬಂಗಾಳದಲ್ಲಿ ಕೇಂದ್ರದ ಹಸ್ತಕ್ಷೇಪವನ್ನು ತಾವು ಸಹಿಸುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ನೀಡುವ ಪ್ರಯತ್ನವಾಗಿತ್ತು.


ಪಂಚಮಸಾಲಿ ಪೀಠಗಳ ಗೊಂದಲ- ಭಾಗ 2 ಪಂಚಮಸಾಲಿಗಳ ಪ್ರತ್ಯೇಕ ಪೀಠಕ್ಕೆ ಮೂಲ ಪ್ರೇರಣೆ ಲಿಂಗೈಕ್ಯ ಡಾ. ಕಲಬುರ್ಗಿ

ಬಹುಸಂಖ್ಯಾತ ಪಂಚಮಸಾಲಿ ಸಮುದಾಯ ಪ್ರತ್ಯೇಕ ಪೀಠ ಮಾಡುವ ಕಾರ್ಯಕ್ಕೆ ಮೂಲ ಪ್ರೇರಣೆ ಲಿಂಗೈಕ್ಯ ಡಾ. ಎಂ. ಎಂ. ಕಲಬುರ್ಗಿಯವರು ಎನ್ನುವ ವಿಷಯ ಬಹಳ ಜನಕ್ಕೆ ತಿಳಿದಿಲ್ಲ. ಸಾದರ, ನೇಕಾರ ಮುಂತಾದ ಪೀಠಗಳಿಗಿಂತ ಪಂಚಮಸಾಲಿ ಪೀಠ ಮಾಡಿದರೆ ವೀರಶೈವ ಪಂಚಪೀಠಗಳ ನಡು ಮುರಿದಂತೆ ಎನ್ನುವ ಸಂಗತಿ ಡಾ. ಕಲಬುರ್ಗಿಯವರಿಗೆ ತಿಳಿದಿತ್ತು. ತಮ್ಮ ಪಂಚಮಸಾಲಿ ಶಿಷ್ಯರ ಮೂಲಕ ಈ ಯೋಜನೆಯನ್ನು ಅವರು ಮುನ್ನೆಲೆಗೆ ತಂದರು. ಇದು ವೀರಶೈವ ಪಂಚಪೀಠಗಳು ಕಲಬುರ್ಗಿ ಅವರನ್ನು ದ್ವೇಷಿಸಲು ಮೂಲ ಕಾರಣವಾಯ್ತು.

ಲಿಂಗಾಯತ ಮಠಗಳ ಮೇಲಿನ ಜಾತಿ ಜಂಗಮರ ಯಜಮಾನಿಕೆ ಸಡಿಲಗೊಳ್ಳುವ ಪ್ರಕ್ರಿಯೆ ಆರಂಭಗೊಂಡ ನಂತರ ಪಂಚಮಸಾಲಿಗಳು ತಮಗೂ ಒಂದು ಪೀಠ ಬೇಕು ಎಂದು ಆಶಿಸಿದರು. ತಮ್ಮ ಉಪವರ್ಗಕ್ಕೆ ಪ್ರತ್ಯೇಕ ಪೀಠ ಏಕೆ ಬೇಕು ಎನ್ನುವ ಸ್ಪಷ್ಟ ತಿಳಿವಳಿಕೆ, ಮುಂದಾಲೋಚನೆ ಹಾಗು ದೂರದೃಷ್ಟಿ ಆ ವರ್ಗಕ್ಕೆ ಇಲ್ಲದೆ ಹೋದರೆ ಏನಾಗಬಹುದು ಎನ್ನುವುದಕ್ಕೆ ಇಂದಿನ ಪಂಚಮಸಾಲಿ ಪೀಠಗಳ ರಾದ್ದಾಂತವು ಒಂದು ಸೂಕ್ತ ಉದಾಹರಣೆಯಾಗಬಲ್ಲದು.

ಲಿಂಗಾಯತರಲ್ಲಿ ಇನ್ನೂ ಅನೇಕ ಉಪವರ್ಗಗಳು ತಮ್ಮದೆಯಾದ ಪ್ರತ್ಯೇಕ ಪೀಠವಿಲ್ಲದೆ ನೆಮ್ಮದಿಯಾಗಿ, ಮರ್ಯಾದೆಯಿಂದ ಬಾಳುತ್ತಿವೆ. ಅಷ್ಟಕ್ಕೂ ಈ ಮಠಗಳು ಹಗರಣಗಳನ್ನು ನೋಡಿ ಅನೇಕ ಲಿಂಗಾಯತರು ನಮಗೆ ಪೀಠಗಳು ಏತಕ್ಕೆ ಬೇಕು ಎಂದು ಪ್ರಶ್ನಿಸುತ್ತಿದ್ದಾರೆ. ಆದಾಗ್ಯೂ ಒಂದು ಉಪವರ್ಗ ತನ್ನದೆ ಆದ ಪೀಠ ಇರಬೇಕೆಂದು ಬಯಸಿದರೆ ಅದಕ್ಕೆ ಸಿರಿಗೆರೆಯ ಸಾಧು ಸದ್ಧರ್ಮ ಪೀಠ ಮಾದರಿಯಾಗಬೇಕು. ಶರಣ ಮರುಳಸಿದ್ಧನನ್ನು ಮರುಳಾರಾಧ್ಯ ಎಂದು ವಂಚಿಸಿ ವೀರಶೈವ ಪಂಚಪೀಠಗಳು ಉಜ್ಜಯನಿ ಪೀಠ ಹೊಡೆದುಕೊಂಡಾಗ ಸಾದರು ಕೈಕಟ್ಟಿ ಕೂಡದೆ ಒಂದು ಕಡೆ ಕಾನೂನು ಹೋರಾಟ ನಡೆಸಿದರೆ, ಮತ್ತೊಂದು ಕಡೆ ಸಿರಿಗೆರೆಯ ಸಾಧು ಸದ್ಧರ್ಮ ಪೀಠ ಸ್ಥಾಪಿಸಿದರು. ಇಂದು ಮಧ್ಯ ಕರ್ನಾಟಕದ ಬಹುತೇಕ ಸಾದರಿಗೆ ಸಿರಿಗೆರೆ ಪೀಠ ಒಂದು ಏಕೈಕ ಶ್ರದ್ಧಾ ಕೇಂದ್ರವಾಗಿದೆ. ಅದಕ್ಕೆ ಒಂದಿಷ್ಟು ಶಾಖಾ ಮಠಗಳೂ ಇದ್ದು ಅವುಗಳಲ್ಲಿ ಸಾಣೇಹಳ್ಳಿಯ ಮಠ ನಾಡಿನಲ್ಲಿ ತನ್ನದೇ ಆದ ಹೆಸರನ್ನು ಹೊಂದಿದೆ. ಸಿರಿಗೆರೆಯ ಹಿಂದಿನ ಜಗದ್ಗುರುಗಳಾಗಿದ್ದ ಶಿವಕುಮಾರ ಸ್ವಾಮಿಗಳಿಗೆ ಲಿಂಗಾಯತ ಧರ್ಮ ಸಿದ್ಧಾಂತ ಮತ್ತು ತತ್ವದ ಸ್ಪಷ್ಟ ತಿಳಿವಳಿಕೆ ಇತ್ತು ಮತ್ತು ಸಾದರ ಉಪವರ್ಗವನ್ನು ಎಲ್ಲಾ ರೀತಿಯಲ್ಲಿ ಹೇಗೆ ಮೇಲೆತ್ತಬೇಕು ಎನ್ನುವ ನಿಖರ ಉಪಾಯಗಳು ಅವರಿಗೆ ಗೊತ್ತಿದ್ದವು.

ಬಯಲು ಸೀಮೆಯ ಮಧ್ಯ ಕರ್ನಾಟಕದ ಸಾದರ ಸಮುದಾಯವನ್ನು ಆರ್ಥಿಕವಾಗಿ ಸಬಲಗೊಳಿಸಲು ಸಿರಿಗೆರೆಯ ಲಿಂಗೈಕ್ಯ ಶಿವಕುಮಾರ ಸ್ವಾಮಿಗಳು ಮಲೆನಾಡಿನ ಅಡಿಕೆ ಬೇಸಾಯವನ್ನು ಛಲಬಿಡದೆ ಬಯಲುಸೀಮೆಗೆ ಪರಿಚಯಿಸಿದರು. ಸರ್ಕಾರಗಳು ಹಾಗು ಜನಪ್ರತಿನಿಧಿಗಳ ಮೇಲೆ ಒತ್ತಡ ಹೇರುವ ಮೂಲಕ ಆ ಭಾಗದಲ್ಲಿ ಕೆರೆ ತುಂಬಿಸುವ ಮುಂತಾದ ನೀರಾವರಿ ಯೋಜನೆಗಳು ಅನುಷ್ಠಾನ ಆಗುವಂತೆ ಮಾಡಿದರು. ಪಂಚಮಸಾಲಿ ಮಠಾಧೀಶರಂತೆ ರಾಜಕೀಯ ಪುಢಾರಿಗಳ ಬಾಲಂಗೋಚಿ ಆಗದೆ ಸಮುದಾಯದ ರಾಜಕಾರಣಿಗಳನ್ನು ಅಕ್ಷರಶಃ ನಿಯಂತ್ರಿಸುತ್ತಿದ್ದರು, ಆ ಸಂಪ್ರದಾಯ



ಸಿರಿಗೆರೆ ಮಠಾಧೀಶರಲ್ಲಿ ಇಂದಿಗೂ ಮುಂದುವರೆದಿದೆ. ಭಕ್ತರೆಲ್ಲ ಸಾದರ ಪೀಠ ಮೆಡಿಕಲ್ ಕಾಲೇಜು ಆರಂಭಿಸಬೇಕೆಂದು ಒತ್ತಾಯಿಸಿದಾಗ ಪೂಜ್ಯರು ಅದನ್ನು ನಿರಾಕರಿಸಿ, ಸಾದರ ಸಮುದಾಯ ದಟ್ಟವಾಗಿರುವ ನೂರಾರು ಹಳ್ಳಿಗಳಲ್ಲಿ ಹೈಸ್ಕೂಲ್ ವರೆಗೆ ಶಾಲೆಗಳನ್ನು ತೆರೆದರು. ಒಬ್ಬ ಉಪ ವರ್ಗದ ಮಠಾಧೀಶ ತನ್ನ ಸಮುದಾಯದ ರಾಜಕಾರಣಿಗಳನ್ನು ಹಿಡಿತದಲ್ಲಿಟ್ಟುಕೊಂಡು ಇಡೀ ಸಮುದಾಯದ ಹಿತಾಸಕ್ತಿಗಾಗಿ ಕಾರ್ಯ ಮಾಡಿದ ಏಕೈಕ ಉದಾಹರಣೆ ಎಂದರೆ ಸಿರಿಗೆರೆಯ ಶಿವಕುಮಾರ ಸ್ವಾಮಿಗಳು ಮತ್ತು ಸಾದರ ಪೀಠ. ಇದರ ಜೊತೆಗೆ ಅವರು ಬಸವ ತತ್ವ ಪ್ರಚಾರ ಮತ್ತು ಅಕ್ಕನ ಬಳಗ ಸ್ಥಾಪನೆಗೆ ಹೆಚ್ಚಿನ ಆದ್ಯತೆ ನೀಡಿದ್ದರು. ಗ್ರಾಮಗಳಲ್ಲಿ ಲಿಂಗಾಯತ ಧರ್ಮದ ಧಾರ್ಮಿಕ ಕಾರ್ಯಗಳು ನಡೆಸಲು ಜಾತಿ ಜಂಗಮರ ಮೇಲೆ ಅವಲಂಬಿತರಾಗದಂತೆ ಹಳ್ಳಿಗೊಂದು ತಮ್ಮದೆ ಸಾದರ ಕುಟುಂಬಕ್ಕೆ ಜಂಗಮ ದೀಕ್ಷೆ ನೀಡುವ ಕ್ರಾಂತಿಕಾರಿ ಹೆಜ್ಜೆಯನಿಟ್ಟರು.

ಈ ಎಲ್ಲಾ ಬೆಳವಣಿಗೆಗಳಿಂದ ವೀರಶೈವ ಪಂಚಪೀಠಗಳ ಪ್ರಭಾವ ಕುಗ್ಗತೊಡಗಿತು. ಎರಡು ಮೂರು ಶತಮಾನಗಳಿಂದ ಲಿಂಗಾಯತರನ್ನು ಮನಸೊ ಇಚ್ಛೆ ಸುಲಿದ ವೀರಶೈವ ಪಂಚಪೀಠಗಳು ತಮ್ಮ ಮಠದ ಆಯಕಟ್ಟಿನ ಜಾಗಗಳನ್ನು ಜಾತಿ ಜಂಗಮರಿಗೆ, ಅದರಲ್ಲೂ ತಮ್ಮ ಪೂರ್ವಾಶ್ರಮದ ಸಂಬಂಧಿಗಳಿಗೆ ಮೀಸಲಿಟ್ಟರು. ಬಹುಸಂಖ್ಯಾತ ಪಂಚಮಸಾಲಿ ಸಮುದಾಯ ಪ್ರತ್ಯೇಕ ಪೀಠ ಮಾಡುವ ಕಾರ್ಯಕ್ಕೆ ಮೂಲ ಪ್ರೇರಣೆ ಲಿಂಗೈಕ್ಯ ಡಾ. ಎಂ. ಎಂ. ಕಲಬುರ್ಗಿಯವರು ಎನ್ನುವ ವಿಷಯ ಬಹಳ ಜನಕ್ಕೆ ತಿಳಿದಿಲ್ಲ. ಸಾದರ, ನೇಕಾರ ಮುಂತಾದ ಪೀಠಗಳಿಗಿಂತ ಪಂಚಮಸಾಲಿ ಪೀಠ ಮಾಡಿದರೆ ವೀರಶೈವ ಪಂಚಪೀಠಗಳ ನಡು ಮುರಿದಂತೆ ಎನ್ನುವ ಸಂಗತಿ ಡಾ. ಕಲಬುರ್ಗಿಯವರಿಗೆ ತಿಳಿದಿತ್ತು. ತಮ್ಮ ಪಂಚಮಸಾಲಿ ಶಿಷ್ಯರ ಮೂಲಕ ಈ ಯೋಜನೆಯನ್ನು ಅವರು ಮುನ್ನೆಲೆಗೆ ತಂದರು. ಇದು ವೀರಶೈವ ಪಂಚಪೀಠಗಳು ಕಲಬುರಗಿ ಅವರನ್ನು ದ್ವೇಷಿಸಲು ಮೂಲ ಕಾರಣವಾದರೆ, ವೀರಶೈವರು ಆಂಧ್ರ ಮೂಲದ ಆರಾಧ್ಯ ಬ್ರಾಹ್ಮಣರು ಎಂಬ ಅವರ ಸಂಶೋಧನೆ ಪಂಚಪೀಠಗಳ ಅಸಮಾಧಾನಕ್ಕೆ ಇನ್ನಷ್ಟು ಕಾರಣವಾಯಿತು. ಕಲಬುರಗಿಯವರ ಪ್ರೇರಣೆಯಿಂದ ಪಂಚಮಸಾಲಿ ಪುಢಾರಿಗಳು ಪ್ರತ್ಯೇಕ ಪೀಠ ಸ್ಥಾಪಿಸುವ ಮೊದಲು ವೀರಶೈವ ಪಂಚಪೀಠಗಳೊಂದಿಗೆ ಸಮಾಲೋಚಿಸಿ ಪಂಚಪೀಠಗಳಲ್ಲಿ ಒಂದು ಪೀಠ ಪಂಚಮಸಾಲಿಗಳಿಗೆ ಬಿಟ್ಟುಕೊಡಲು ಆಗ್ರಹಿಸಿದರು.

ಇದಕ್ಕೆ ಪಂಚಪೀಠಗಳು ಒಪ್ಪಲಿಲ್ಲ, ಬದಲಾಗಿ ಅದು ಗುರು ಪೀಠ ಆಗಿರಲಿ, ವಿರಕ್ತ ಪೀಠವಾಗಲಿ ಜಂಗಮರು ಮಾತ್ರ ಲಿಂಗಾಯತ ಮಠಗಳಿಗೆ ಗುರು ಆಗಲು ಅರ್ಹರು, ಲಿಂಗಾಯತರು ಏನಿದ್ದರೂ ದೇಣಿಗೆ ಕೊಡಲು, ಪಲ್ಲಕ್ಕಿ ಹೊರಲು ಮಾತ್ರ ಅರ್ಹರು ಎನ್ನುವುದು ವೀರಶೈವ ಪಂಚಪೀಠಗಳ ಧೃಡ ನಿಲುವಾಗಿತ್ತು. ದಾವಣಗೆರೆಯಲ್ಲಿ ಪಂಚಮಸಾಲಿ ಮುಖಂಡರು ಹಾಗು ಪಂಚಪೀಠಗಳ ನಡುವೆ ಈ ಕುರಿತು ನಡೆದ ಚರ್ಚೆ ವಾಗ್ವಾದ, ರಂಪಾಟದಲ್ಲಿ ಹಾಗು ಅಂತಿಮವಾಗಿ ಕೈಕೈ ಮಿಲಾಯಿಸುವಲ್ಲಿ ಕೊನೆಗೊಂಡಿತು. ಕೊನೆಗೆ ಪಂಚಮಸಾಲಿ ಸಮುದಾಯ ತಮ್ಮದೆ ಪ್ರತ್ಯೇಕ ಪೀಠ ಸ್ಥಾಪಿಸಲು ನಿರ್ಧರಿಸಿತು. ಆದರೆ, ಪೀಠ ಏತಕ್ಕಾಗಿ ಬೇಕು, ಸ್ಥಾಪನೆಯಾದ ಮೇಲೆ ಅದರ ಉದ್ದೇಶಗಳು ಹೇಗೆ ಈಡೇರಿಸಿಕೊಳ್ಳಬೇಕು ಎನ್ನುವ ನೀಲಿ ನಕ್ಷೆಯ ಕಡೆಗೆ ಗಮನ ಕೊಡಲಿಲ್ಲ. ಪೀಠ ಸ್ಥಾಪನೆಗೆ ಮೊದಲೇ ಪಂಚಮಸಾಲಿ ಸಮುದಾಯದಲ್ಲಿ ಭಿನ್ನಾಭಿಪ್ರಾಯ ಹಾಗು ಗೊಂದಲ ಹುಟ್ಟುಹಾಕುವಲ್ಲಿ ಪಂಚಪೀಠಗಳು ಯಶಸ್ವಿಯಾದವು. ಉಳಿದ ಲಿಂಗಾಯತ ಉಪವರ್ಗಗಳಂತೆ ಪಂಚಮಸಾಲಿಗಳು ಜಾಣರಲ್ಲ, ಅತೀ ಮುಗ್ಧರು ಹಾಗು ಅವಕಾಶವಾದಿಗಳು. ಆ ಕಾರಣದಿಂದಲೇ ಪಂಚಮಸಾಲಿ ಸಮುದಾಯ ನಿರಂತರವಾಗಿ ಜಂಗಮರು ಹಾಗು ಬಣಜಿಗರಿಂದ ಹೆಚ್ಚು ಬಳಸಲ್ಪಟ್ಟಿತು. ಜೈನ ಮೂಲದಿಂದ ಲಿಂಗಾಯತರಾದ ಶೀಲವಂತ ಬಣಜಿಗರು ಹುಟ್ಟು ವ್ಯಾಪಾರಿಗಳು ಹಾಗು ವ್ಯವಹಾರ ಚತುರರು, ಮತ್ತು ಲಿಂಗಾಯತ ಸಮುದಾಯದಲ್ಲಿ ಅತ್ಯಂತ ಕಡಿಮೆ ಸಂಖ್ಯೆಯಲ್ಲಿರುವವರು.

ಹಳ್ಳಿಗಳಲ್ಲಿ ಬಣಜಿಗರ ವ್ಯಾಪಾರ, ವ್ಯವಹಾರ ನಡೆಯಲು ಬಹುಸಂಖ್ಯಾತ, ಮುಗ್ಧ ಹಾಗು ಭೂ ಹಿಡುವಳಿದಾರ ಪಂಚಮಸಾಲಿಗಳ ಅಗತ್ಯ ಬಣಜಿಗರಿಗಿತ್ತು. ಶೈವ ಮೂಲದಿಂದ ಲಿಂಗಾಯತರಾದ ಆದಿಬಣಜಿಗರು ಜೈನ ಮೂಲದ ಶೀಲವಂತ ಬಣಜಿಗರಿಂದ ಸುರಕ್ಷಿತ ಅಂತರ ಕಾಯ್ದುಕೊಂಡಿದ್ದರು. ಕಾರಣ, ಕಲ್ಯಾಣ ಸಾಮ್ರಾಜ್ಯದಲ್ಲಿ ಬಸವಣ್ಣನವರ ಕಾಲದಲ್ಲಿದ್ದ ಜೈನ ಮತ್ತು ಶೈವರ ನಡುವಿನ ಸಂಘರ್ಷದ ಕಹಿ ಅನುಭವ ಈ ಎರಡೂ ಬಣಜಿಗರನ್ನು ಹತ್ತಿರಕ್ಕೆ ತರಲು ಬಿಡಲಿಲ್ಲ. ಆದಿ ಬಣಜಿಗರು ಶೀಲವಂತ ಬಣಜಿಗರಂತೆ ವ್ಯಾಪಾರವನ್ನು ಮಾತ್ರ ನೆಚ್ಚಿಕೊಳ್ಳದೆ ಕೃಷಿಯಲ್ಲಿ ತೊಡಗಿದ್ದರು. ತಮ್ಮ ವ್ಯಾಪಾರದ ಅನುಕೂಲಕ್ಕಾಗಿ ಶೀಲವಂತ ಬಣಜಿಗರು ಪಂಚಮಸಾಲಿಗಳನ್ನು ಓಲೈಸಲೇಬೇಕಾಯಿತು.

ಪಂಚಮಸಾಲಿ ಹಾಗು ಬಣಜಿಗರು ಒಂದೇ ತಂದೆಯ ಮಕ್ಕಳು, ಒಬ್ಬ ಕೃಷಿ ಮಾಡಿ ಪಂಚಮಸಾಲಿ ಆದ, ಇನ್ನೊಬ್ಬ ವ್ಯಾಪಾರ ಮಾಡಿ ಬಣಜಿಗ ಎನ್ನಿಸಿಕೊಂಡ ಎನ್ನುವ ಅನುಕೂಲಸಿಂಧು ಪರಿಕಲ್ಪನೆ ತೇಲಿ ಬಿಡಲಾಯಿತು. ಆ ಮೂಲಕ ನೂರು-ಇನ್ನೂರು ವರ್ಷಗಳ ಹಿಂದೆ ದೂರ ಇಡಲ್ಪಟ್ಟಿದ್ದ ಶ್ರೀಮಂತ, ಬಲಾಢ್ಯ ಪಂಚಮಸಾಲಿ ಹುಡುಗರಿಗೆ ಶೀಲವಂತ ಬಣಜಿಗರು ಹೆಣ್ಣು ಕೊಟ್ಟು ಸಂಬಂಧ ಬೆಳೆಸಲು ಆರಂಭಿಸಿದರು. ಪಂಚಮಸಾಲಿಗಳ ಆಶ್ರಯದಲ್ಲಿ ಬಣಜಿಗರ ವ್ಯಾಪಾರ ವ್ಯವಹಾರಗಳು ಸುರಕ್ಷಿತವಾಗಿ ಅಭಿವೃದ್ಧಿ ಹೊಂದಿದವು.

ಅಕ್ಷರ ಆವಿಷ್ಕಾರ ಯೋಜನೆಯ ಅತಿಥಿ ಶಿಕ್ಷಕರ ಗೌರವದನ ಬಿಡುಗಡೆ ಮಾಡಿರುವಂತೆ ಶಾಸಕರಾದ ದದ್ದಲ್ ಗೆ ಎಐಡಿವೈಓ ಮನವಿ

ರಾಯಚೂರು,ಏ.29-

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಏಏಖಆಃ) ಯ ಅಕ್ಷರ ಆವಿಷ್ಕಾರ ಯೋಜನೆ ಅಡಿಯಲ್ಲಿ ಸರ್ಕಾರಿ ಶಾಲೆಗಳಲ್ಲಿ ಹೊಸದಾಗಿ ಪ್ರಾರಂಭವಾದ ಎಲ್.ಕೆ.ಜಿ(ಐಏಉ), ಯುಕೆಜಿ(ಏಉ) (ಇಸಿಸಿಇ)ಮತ್ತು ದ್ವಿಭಾಷಾ (ಬೈಲಿಂಗ್ವಲ್) ತರಗತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು ಹಾಗೂ ಆಯಾಗಳಿಗೆ ಜೂನ್ ತಿಂಗಳಿನಿಂದ ಸಂದಾಯವಾಗದೇ ಇರುವ 10ತಿಂಗಳ ಗೌರವಧನ ಕೂಡಲೇ ಬಿಡುಗಡೆ ಮಾಡುವಂತೆ ಆಗ್ರಹಿಸಿ ಇಂದು ಬೆಳಗ್ಗೆಯಿಂದಲೇ ಅತಿಥಿ ಶಿಕ್ಷಕರು ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಷನ್(ಎಐಡಿವೈಓ) ನೇತೃತ್ವದಲ್ಲಿ ಇಂದು ರಾಯಚೂರು ನಗರದ ಟಿಪ್ಪು ಸುಲ್ತಾನ್ ಗಾರ್ಡನ್ ಪ್ರತಿಭಟನಾ ಧರಣಿ ನಡೆಸಿದರು.

ಕಳೆದ ಹತ್ತು ತಿಂಗಳಿನಿಂದ ಗೌರವಧನ ಬಿಡುಗಡೆ ಆಗದೇ ಇರುವುದರಿಂದ ಬಹಳಷ್ಟು ಅತಿಥಿ ಶಿಕ್ಷಕರು ತೊಂದರೆಗೆ ಸಿಲುಕಿದ್ದಾರೆ. ಅವರು ಕುಟುಂಬ ನಿರ್ವಹಣೆಗೆ ಪರದಾಡುತ್ತಿದ್ದಾರೆ. ಸಾಲ ಮಾಡಿಕೊಂಡು ತೀವ್ರವಾದ ಆರ್ಥಿಕ ಸಂಕಷ್ಟಕ್ಕೆ ಗುರಿಯಾಗಿದ್ದಾರೆ. ಆರ್ಥಿಕ ವರ್ಷ ಕೆನೆಗೊಂಡು ಏಪ್ರಿಲ್ ತಿಂಗಳು ಸಹ ಮುಗಿಯಲು ಬಂದರೂ ಗೌರವಧನ ದೊರೆಯದೆ ಇರುವುದರಿಂದ ಮತ್ತಷ್ಟು ಆತಂಕಕ್ಕೆ ಒಳಗಾಗಿದ್ದಾರೆ.

ಈ ಬಗ್ಗೆ ಕಳೆದ ಅಕ್ಟೋಬರ್ ತಿಂಗಳಿನಿಂದ ಅತಿಥಿ ಶಿಕ್ಷಕರು ಹಾಗೂ ಆಯಾಗಳು ಗೌರವ ಧನ ಬಿಡುಗಡೆ ಮಾಡುವಂತೆ ಸಂಬಂಧಪಟ್ಟ ಬಿಇಒ, ಡಿಡಿಪಿಐ, ಜಿಲ್ಲಾಧಿಕಾರಿಗಳು ಹಾಗೂ ಕೆಕೆಆರ್‌ಡಿಬಿ ಅಧ್ಯಕ್ಷರಿಗೂ ಸಹ ಮನವಿ ಪತ್ರ ಸಲ್ಲಿಸಲಾಗಿದೆ. ಬಿಡುಗಡೆ ಮಾಡುವ ಭರವಸೆಗಳು ಭರವಸೆಗಳಾಗಿ ಉಳಿದಿವೆ. ಮತ್ತೆ ಸಾಲ ಮಾಡಿ ಸ್ವತಃ ಖರ್ಚು ಮಾಡಿಕೊಂಡು ಕಚೇರಿಗಳನ್ನು ಅಲೆಯಬೇಕಾಗಿದೆ. ಕೆಲಸ ಮಾಡಿದರೂ ಗೌರವಧನಕ್ಕಾಗಿ ಪರದಾಡುವ ಪರಿಸ್ಥಿತಿ ಬಂದಿದೆ

ಈ ಅತಿಥಿ ಶಿಕ್ಷಕರಿಗೆ ಕೆಕೆಆರ್‌ಡಿಬಿ ಇಂದ ಹಂಚಿಕೆ ಮಾಡಲಾದ ಶಾಸಕರ ಅನುದಾನದಲ್ಲಿ ಗೌರವಧನ ನೀಡಬೇಕು ಎಂದು ಸರ್ಕಾರ ನಿರ್ಧರಿಸಿದೆ. ಆದರೆ ಶಾಸಕರು ನಮಗೆ ಬರುವ ಅಲ್ಪ ಅನುದಾನದಲ್ಲಿ ಗೌರವಧನ ನೀಡಿದರೆ ನಮ್ಮ ಅಭಿವೃದ್ಧಿಗೆ ಉಳಿಯುವುದೇನು? ಎಂದು ಕೇಳುತ್ತಿದ್ದಾರೆ. ಆದ್ದರಿಂದ ಕೆಕೆಆರ್‌ಡಿಬಿಯು ಅಕ್ಷರ ಆವಿಷ್ಕಾರ ಯೋಜನೆಯ ಅಡಿಯಲ್ಲಿ ನೇಮಿಸಿಕೊಳ್ಳಲಾದ ಎಲ್ಲಾ ಅತಿಥಿ ಶಿಕ್ಷಕರಿಗೆ ನೇರವಾಗಿ ಗೌರವಧನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಬೇಕು. ಇಲ್ಲವೇ ಸರ್ಕಾರವೇ ನೇರವಾಗಿ ಎಲ್ಲಾ ಅತಿಥಿ ಶಿಕ್ಷಕರ ಜೊತೆಗೆ ಅನುದಾನವನ್ನು ಬಿಡುಗಡೆ ಮಾಡಬೇಕು. ಹಾಗಾದಾಗ ಮಾತ್ರ ಈ ಸಮಸ್ಯೆಯು ಸರಳವಾಗಿ ಪರಿಹಾರವಾಗುತ್ತದೆ. ಶಾಸಕರು ಮತ್ತು ಅಧಿಕಾರಿಗಳ ಸಮನ್ವಯತೆ ಕೊರತೆಯಿಂದ ಅತಿಥಿ ಶಿಕ್ಷಕರು ಸಂಕಷ್ಟಕ್ಕೆ ಗುರಿಯಾಗಿದ್ದಾರೆ. ಹಾಗೂ ಸಂಬಂಧಪಟ್ಟವರು ಸೂಕ್ತವಾಗಿ ಸ್ಪಂಧಿಸದೇ ಇರುವುದರಿಂದ

ಅನಿವಾರ್ಯವಾಗಿ ಪ್ರತಿಭಟನೆಗೆ ಇಳಿಯಬೇಕಾದ ಪರಿಸ್ಥಿತಿ ನಿರ್ಮಾಣ ಮಾಡಲಾಗಿದೆ ಎಂದು ಪ್ರತಿಭಟನಾಕಾರರು ಅಭಿಪ್ರಾಯಪಟ್ಟರು.

ಇದಲ್ಲದೆ, ಮಾನ್ಯ ಮುಖ್ಯಮಂತ್ರಿಗಳು 202526ನೇ ಸಾಲಿನ ಆಯವ್ಯಯ ಭಾಷಣದಲ್ಲಿ (ಕಂಡಿಕೆ 111(1)) ಅತಿಥಿ ಶಿಕ್ಷಕರ ಗೌರವಧನವನ್ನು 2000 ಹೆಚ್ಚಿಸುವುದಾಗಿ ಘೋಷಣೆ ಮಾಡಿ ಆದೇಶ ಹೊರಡಿಸಿದ್ದರು, ಅದು ಎಲ್ಲಾ ಅತಿಥಿ ಶಿಕ್ಷಕರಿಗೆ ಅನ್ವಯವಾಗುತ್ತದೆ. ಆದರೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ನೇಮಕವಾದ ಅತಿಥಿ ಶಿಕ್ಷಕರಿಗೆ ಏಕೆ ಅನ್ವಯಿಸುವುದಿಲ್ಲ ಎಂಬ ಪ್ರಶ್ನೆಗೆ ಸೂಕ್ತವಾದ ಉತ್ತರ ದೊರಕಿಲ್ಲ. ಈಗಾಗಲೇ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಶಿಕ್ಷಕರಿಗೆ 5ತಿಂಗಳ ಗೌರವ ಧನ ಪ್ರತಿತಿಂಗಳಿಗೆ 12ಸಾವಿರದಂತೆ ಒಟ್ಟು 60 ಸಾವಿರ ಬಿಡುಗಡೆ ಮಾಡಲಾಗಿದೆ. ನಮ್ಮ ಜಿಲ್ಲೆಯಲ್ಲಿ ಮಾತ್ರ 6ತಿಂಗಳಿಗೆ 10ಸಾವಿರದಂತೆ ನೀಡಲಾಗಿದೆ. ಇದು ಒಂದೇ ಶಾಲೆಯಲ್ಲಿ ಕಾರ್ಯನಿರ್ವಹಿಸುವ ಅತಿಥಿ ಶಿಕ್ಷಕರ ನಡುವೆ ಗೌರವಧನ ನೀಡಿಕೆಯಲ್ಲಿ ತಾರತಮ್ಯ ತೋರಿಸಿದಂತಾಗಿದೆ.

ಬೇಡಿಕೆಗಳು :- 1. ಅತಿಥಿ ಶಿಕ್ಷಕರು ಮತ್ತು ಆಯಾಗಳ ಹತ್ತು ತಿಂಗಳ ಗೌರವಧನವನ್ನು ಈ ಕೂಡಲೇ ಬಿಡುಗಡೆ ಮಾಡಬೇಕು. 2. ಅತಿಥಿ ಶಿಕ್ಷಕರಿಗೆ 12,000 ಮತ್ತು ಆಯಾಗಳಿಗೆ 6,250 ರೂಪಾಯಿಗಳನ್ನು ಬಿಡುಗಡೆ ಮಾಡಬೇಕು. 3. ಈಗಾಗಲೇ ತಿಂಗಳಿಗೆ 10,000 ದಂತೆ ಆರು ತಿಂಗಳ ಗೌರವ ಧನ ಬಿಡುಗಡೆಯಾದ ಅತಿಥಿ ಶಿಕ್ಷಕರಿಗೆ ಇನ್ನೂ 2,000 ಗೌರವಧನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಬೇಕು. ಆಯಾಗಳಿಗೂ ಸಹ ಬಾಕಿ ಗೌರವ ಧನ ಬಿಡುಗಡೆ ಮಾಡಬೇಕು. 4. ಇಸಿಸಿಇ ಮತ್ತು ದ್ವಿಭಾಷಾ ಅತಿಥಿ ಶಿಕ್ಷಕರಿಗೆ ನೇರವಾಗಿ ಸರ್ಕಾರ ಅಥವಾ ಕೆಕೆಆರ್‌ಡಿಬಿ ಗೌರವಧನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಬೇಕು. ಶಾಸಕರ ಅನುದಾನ ಜೊತೆಗೆ ಇದನ್ನು ತಳಕು ಹಾಕಬಾರದು.

ಪ್ರತಿಭಟನೆಯ ನಂತರ ಬಹುತೇಕವಾಗಿ ಗ್ರಾಮೀಣ ಶಿಕ್ಷಕರಿಗೆ ಗೌರವಧನ ಬಿಡುಗಡೆಯಾಗುವುದೇ ಇರುವುದರಿಂದ, ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಗದ್ದಲ್ ಬಸನಗೌಡ ಅವರನ್ನು ಭೇಟಿ ಮಾಡಿ ಸಮಸ್ಯೆ ಪರಿಹರಿಸಲು ಒತ್ತಾಯಿಸಲಾಯಿತು. ಅವರು ಈ ಗುರುತಿಸ್ ಸ್ಪಂದಿಸಿ ಕೂಡಲೇ ಜಿಲ್ಲಾಧಿಕಾರಿಗಳು ಮತ್ತು ಕೆಕೆಆರ್‌ಡಿವಿ ಅಧ್ಯಕ್ಷರ ಜೊತೆ ಮಾತನಾಡಿ ಸಮಸ್ಯೆಯನ್ನು ಪರಿಹರಿಸುವುದಾಗಿ ಭರವಸೆ ನೀಡಿದರು. ಇದೇ ಸಂದರ್ಭದಲ್ಲಿ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ಉಪ ನಿರ್ದೇಶಕರಾದ ಕೆಡಿ ಬಡಿಗೇರ್ ಅವರಿಗೂ ಮನವಿ ಸಲ್ಲಿಸಲಾಯಿತು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR